ವಿಜಯಪುರ | ಸಂಪುಟ 04 | ಸಂಚಿಕೆ 249 | ಪುಟ 04 | ₹ 3.00

https://udayarashminews.com

udayarashmi 90088 88340

ಉದಯರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com


RNI NO: KARKAN/2023/86203

ಶನಿವಾರ, ನವೆಂಬರ್ 28, 2026

"ಆಶಾ ಕಾರ್ಯಕರ್ತೆಯರ ಸಮಸ್ಯೆಗಳು ನನಗೆ ಅರ್ಥವಾಗಿವೆ. ದಯವಿಟ್ಟು ಕೆಲಸಕ್ಕೆ ಮರಳಿ. ಈ ಹೋರಾಟ ಕೇವಲ ನಿಮ್ಮದಷ್ಟೇ ಅಲ್ಲ; ಆದರೆ, ಇಂತಹ ವಿಷಯಕ್ಕಾಗಿ ಪ್ರತಿಭಟನೆಯ ಹಾದಿ ಹಿಡಿಯುವುದು ಸರಿಯಲ್ಲ. ನಾನು ಎಲ್ಲರನ್ನೂ ಕರೆದು ಸಭೆ ನಡೆಸಿ ನಿರ್ಧಾರ ತೆಗೆದುಕೊಳ್ಳುತ್ತೇನೆ. ನಿಮಗೆ ಸಹಾಯ ಮಾಡುತ್ತೇನೆ. ನನ್ನ ಮೇಲೆ ನಂಬಿಕೆ ಇಡಿ."



■ ಡಿ.ಕೆ.ಶಿವಕುಮಾರ್
ಮುಖ್ಯಮಂತ್ರಿ



'ಜಯ ಕನಕ' ಧ್ವನಿ ಸುರುಳಿ ಬಿಡುಗಡೆ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ತಾಲೂಕು ಆಡಳಿತ ಸಿಂದಗಿ ವತಿಯಿಂದ ಹಮ್ಮಿಕೊಂಡ ದಾಸಶ್ರೇಷ್ಠ ಕನದಾಸರ ಜಯಂತೋತ್ಸವ ಕಾರ್ಯಕ್ರಮದಲ್ಲಿ ಬೋರಗಿ ಗ್ರಾಮದ ಹೆಡ್ ಕಾನ್ಸ್‌ಟೇಬಲ್ ಮೌಲಾಲಿ ಆಲಗೂರ ರಚನೆಯ ಜಯ ಕನಕ ಧ್ವನಿಸುರುಳಿಯನ್ನು ಬಿಡುಗಡೆ ಮಾಡಲಾಯಿತು.

ಕುರುಬ ಸಂಘದ ತಾಲೂಕು ನಿಂಗಣ್ಣ ಬಳ್ಳಾ, ಎಪಿಎಂಸಿ ಅಧ್ಯಕ್ಷ ಕಲ್ಲಪ್ಪ ನಾಯ್ಕೋಡಿ, ನಗರಸಭೆ ಪೌರಾಯುಕ್ತ ರವಿ ಸಿರಗುಪ್ಪಿ, ಗ್ಯಾರಂಟಿ ಯೋಜನೆಗಳ ತಾಲೂಕು ಅಧ್ಯಕ್ಷ ಸಂತೋಷ ಸಾಲಿ, ಗುಬ್ಬೇವಾಡದ ಒಡೆಯರ ಶ್ರೀಗಳು ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.



ಕನಕದಾಸರ ಆದರ್ಶದ ಬದುಕು ನಮಗೆ ದಾರಿದೀಪ

■ ಉದಯರಶ್ಮಿ ದಿನಪತ್ರಿಕೆ

ಆಲಮೇಲ: ಸಂತ ಶ್ರೇಷ್ಠ ಕನಕದಾಸರ ಆದರ್ಶ ನಮಗೆ ದಾರಿದೀಪ ಅವರ ತತ್ವ ಸಿದ್ಧಾಂತ, ಕೀರ್ತನೆಗಳು ದೇಶಕ್ಕೆ ಮಾದರಿಯಾಗಿವೆ ಎಂದು ಕರ್ನಾಟಕ ಪ್ರದೇಶ್ ಕುರುಬ ಸಂಘದ ತಾಲೂಕು ಅಧ್ಯಕ್ಷ ಸಿದ್ದು ಕೆರಿಗೊಂಡ ಹೇಳಿದರು. ಪಟ್ಟಣದ ತಹಸಿಲ್ದಾರ್ ಕಚೇರಿಯಲ್ಲಿ ಹಮ್ಮಿಕೊಂಡ ಭಕ್ತ ಕನಕದಾಸರ 539ನೇ ಜಯಂತೋತ್ಸವ ಕಾರ್ಯಕ್ರಮದಲ್ಲಿ ಕನಕರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅವರು ಮಾತನಾಡಿದರು.

ಮಹಾನ್ ಸಂತರ ಆದರ್ಶದ ಬದುಕು ನಮ್ಮೆಲ್ಲರಿಗೂ ದಾರಿ ದೀಪ. ತಮ್ಮ ಅಪಾರವಾದ ಭಕ್ತಿಯ ಮೂಲಕ ದೇವರನ್ನು ಒಲಿಸಿಕೊಂಡ ಮಹಾನ್ ಚೇತನರು ಕನಕದಾಸರು ಎಂದರು.

ಸಮಾಜದ ಮುಖಂಡ ರಮೇಶ್ ಬಂಟನೂರು ಮಾತನಾಡಿ, ಸಂತರ ಶರಣರ ದೇಶಭಕ್ತರ ದೇಶ ಗಾಗಿ ತಮ್ಮ ಪ್ರಾಣವನ್ನೇ ಮುಡುಪಾಗಿಟ್ಟಂತಹ ಶೂರರ ಜಯಂತೋತ್ಸವವನ್ನು ಕೇವಲ ಒಂದೇ ದಿನಕ್ಕೆ ಸೀಮಿತವಾಗಬಾರದು ಡಾ, ಅಂಬೇಡ್ಕರ್, ಭಗತ್ ಸಿಂಗ್, ಅಹಿಲಾಬಾಯಿ ಹೋಳ್ಕರ್, ಕಿತ್ತೂರ ರಾಣಿ ಚೆನ್ನಮ್ಮ, ಸಂಗೊಳ್ಳಿ ರಾಯಣ್ಣ, ಅನೇಕ ವೀರಶೂರರ ಇತಿಹಾಸವನ್ನು ಯುವ ಪೀಳಿಗೆಗೆ ತಿಳಿಸುವಂತ ಕಾರ್ಯ ನಮ್ಮಿಂದಾಗಬೇಕು ಎಲ್ಲ ಸಮಾಜದ ಮಕ್ಕಳಿಗೆ ಶಿಕ್ಷಣ ಕೊಡಿಸಿ ದೇಶಭಕ್ತಿ ಬೆಳೆಸಬೇಕು ಎಂದು ಹೇಳಿದರು.

ಜಯಂತೋತ್ಸವ ಕಾರ್ಯಕ್ರಮದಲ್ಲಿ ಉಪತಹಸಿಲ್ದಾರ್ ಪಿ.ಎಸ್.ಮೂಕಿಹಾಳ, ಆಡಳಿತ ಅಧಿಕಾರಿಗಳಾದ ವಿನೋದ ಬಿಸೆ, ಮಡಿವಾಳಪ್ಪ ಬಿರಾದಾರ, ಶಾಂತು ಕಟ್ಟಿಮನಿ, ನಿಂಗರಾಜ ಬಂಟನೂರ, ರಮೇಶ ಕಟ್ಟಿಮನಿ, ಸಿದ್ದಪ್ಪ ಗುಬದೊಡ್ಡಿ, ಸಂತೋಷ ಕಟ್ಟಿಮನಿ, ಶರಣು ಪೂಜಾರಿ, ಸಿಂಧೂ ಕಟ್ಟಿಮನಿ, ಸೇರಿದಂತೆ ಅನೇಕರು ಇದ್ದರು.

ಪ್ರಧಾನಿ ಮೋದಿ ಉಳಿತಾಯ ಸಂದೇಶಕ್ಕೆ ಸಂಸದ ಜಿಗಜಿಣಗಿ ಬೆಂಬಲ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ದೇಶದ ಜನತೆಗೆ ನೀಡಿರುವ ಉಳಿತಾಯ, ಆರ್ಥಿಕ ಶಿಸ್ತು ಹಾಗೂ ಉತ್ತಮ ಜೀವನಶೈಲಿಯನ್ನು ಅಳವಡಿಸಿಕೊಳ್ಳುವ ಮಹತ್ವದ ಸಂದೇಶವನ್ನು ವಿಜಯಪುರ ಲೋಕಸಭಾ ಸಂಸದ ರಮೇಶ ಜಿಗಜಿಣಗಿ ಅವರು ಬೆಂಬಲಿಸಿದ್ದಾರೆ.

ದೇಶದ ಪ್ರತಿಯೊಬ್ಬ ನಾಗರಿಕರು ದುಂದುವೆಚ್ಚಕ್ಕೆ ಕಡಿವಾಣ ಹಾಕಿ, ಉಳಿತಾಯದ ಮನೋಭಾವ ಬೆಳೆಸಿಕೊಳ್ಳುವುದು ಇಂದಿನ ಅಗತ್ಯವಾಗಿದೆ. ಕುಟುಂಬದ ಆರ್ಥಿಕ ಭದ್ರತೆ ಹಾಗೂ ಭವಿಷ್ಯದ ದೃಷ್ಟಿಯಿಂದ ಉಳಿತಾಯ ಅತ್ಯಂತ ಮುಖ್ಯವಾಗಿದೆ. ಪ್ರಧಾನಿ ಮೋದಿ ಅವರು ನೀಡಿರುವ ಈ ಸಂದೇಶ ಜನಸಾಮಾನ್ಯರಿಗೆ ಉತ್ತಮ ಮಾರ್ಗದರ್ಶನವಾಗಿದೆ.

ಕಳೆದ ವರ್ಷಗಳಲ್ಲಿ ದೇಶದಲ್ಲಿ ಬಡತನ ನಿರ್ಮೂಲನೆ ಹಾಗೂ ಜನರ ಆರ್ಥಿಕ ಸಬಲೀಕರಣಕ್ಕಾಗಿ ಹಲವು ಅಭಿವೃದ್ಧಿ ಕಾರ್ಯಕ್ರಮಗಳನ್ನು ಜಾರಿಗೊಳಿಸಲಾಗಿದೆ. 2011ರಿಂದ 2023ರ ಅವಧಿಯಲ್ಲಿ ಸುಮಾರು 50 ಕೋಟಿ ಜನರು ಬಡತನದಿಂದ ಹೊರಬಂದಿರುವುದು ಮಹತ್ವದ ಬೆಳವಣಿಗೆಯಾಗಿದೆ.

ಅದೇ ರೀತಿ ಯುವಜನತೆ ಮಾದಕ ವ್ಯಸನಗಳಿಂದ ದೂರವಿದ್ದು, ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕು. ದೇಶದ ಭವಿಷ್ಯವಾಗಿರುವ ಯುವಶಕ್ತಿಯನ್ನು ಸರಿಯಾದ ದಾರಿಯಲ್ಲಿ ಮುನ್ನಡೆಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ.ಪ್ರಧಾನಿ ನರೇಂದ್ರ ಮೋದಿ ಅವರ ಈ ಸಂದೇಶವನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಂಡು, ಆರ್ಥಿಕವಾಗಿ ಸದೃಢ ಹಾಗೂ ಅಭಿವೃದ್ಧಿ ಹೊಂದಿದ ಭಾರತ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಸಂಸದ ರಮೇಶ ಜಿಗಜಿಣಗಿ ತಿಳಿಸಿದ್ದಾರೆ.



ಮಹಿಳಾ ವಿವಿಯಲ್ಲಿ ಕನಕದಾಸ ಜಯಂತಿ ಆಚರಣೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿವಿಯ ಕನಕದಾಸ ಅಧ್ಯಯನ ಪೀಠದ ವತಿಯಿಂದ ಕನಕದಾಸ ಜಯಂತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದಲ್ಲಿ ಕನಕದಾಸರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು. ಸಮಾಜಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರೊ. ಎಂ. ಪಿ. ಬಳಿಗಾರ್ ಕನಕ ಕೀರ್ತನೆಗಳನ್ನು ಹಾಡಿದರು.

ಕಾರ್ಯಕ್ರಮದಲ್ಲಿ ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರಾದ ಪ್ರೊ. ಶಾಂತಾದೇವಿ ಟಿ, ಪ್ರೊ. ಶ್ರೀನಿವಾಸ್, ಪ್ರೊ. ಲಕ್ಷ್ಮೀದೇವಿ, ಡಾ. ಸಂಜೀವ್ ಕುಮಾರ್ ಗಿರಿ, ಡಾ. ನಟರಾಜ್ ದುರ್ಗನ್ನವರ್, ಡಾ. ಅಮರನಾಥ್ ಪ್ರಜಾಪತಿ, ವಿವಿಯ ಅತಿಥಿ ಉಪನ್ಯಾಸಕರು, ಬೋಧಕೇತರ ಸಿಬ್ಬಂದಿಗಳು, ಸಂಶೋಧನಾ ವಿದ್ಯಾರ್ಥಿನಿಯರು, ಸ್ನಾತಕ ಮತ್ತು ಸ್ನಾತಕೋತ್ತರ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು. ಕನಕದಾಸ ಅಧ್ಯಯನ ಪೀಠದ ಸಂಯೋಜಕ ಡಾ. ಸಂದೀಪ್ ಸ್ವಾಗತಿಸಿ ವಂದಿಸಿದರು.

ಬಿಜೆಪಿ-ಜೆಡಿಎಸ್ ನಾಯಕರ ಸಭೆ | ಮುಂಬರುವ ಎಲ್ಲ ಚುನಾವಣೆಗಳನ್ನೂ ಒಗ್ಗಟ್ಟಿನಿಂದ ಎದುರಿಸಲು ನಿರ್ಧಾರ | ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿ ಸಮನ್ವಯ ಸಮಿತಿಗಳನ್ನು ರಚಿಸಲು ನಿರ್ಧಾರ

ಕಾಂಗ್ರೆಸ್‌ಗೆ ಟಕ್ಕರ್ ಕೊಡಲು ಬಿಜೆಪಿ–ಜೆಡಿಎಸ್ ಮಾಸ್ಟರ್ ಪ್ಲ್ಯಾನ್

ಬೆಂಗಳೂರು: ರಾಜ್ಯದಲ್ಲಿ ತಮ್ಮ ಮೈತ್ರಿ ಸಂಬಂಧವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮಹತ್ವದ ನಿರ್ಧಾರ ಕೈಗೊಂಡಿವೆ.

ಮುಂಬರುವ ಎಲ್ಲಾ ಚುನಾವಣೆಗಳಲ್ಲೂ ಒಟ್ಟಾಗಿ ಸ್ಪರ್ಧಿಸಲು ಉಭಯ ಪಕ್ಷಗಳು ನಿರ್ಧರಿಸಿವೆ. ಪಂಚಾಯಿತಿ ಮತ್ತು ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಗಳು ಹಾಗೂ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಗಳನ್ನು ಮೈತ್ರಿಯಾಗಿಯೇ ಎದುರಿಸಲು ಗುರುವಾರ ನಡೆದ ಸಭೆಯಲ್ಲಿ ತೀರ್ಮಾನಿಸಲಾಗಿದೆ.

ಮೈತ್ರಿಯನ್ನು ತಳಮಟ್ಟದಲ್ಲಿ ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿ ಸಮನ್ವಯ ಸಮಿತಿಗಳನ್ನು ರಚಿಸಲು ಎರಡೂ ಪಕ್ಷಗಳ ನಾಯಕರು ನಿರ್ಧರಿಸಿದ್ದಾರೆ.

ರಾಜ್ಯಮಟ್ಟದ ಸಮಿತಿಯನ್ನು ಮುಂದಿನ ನಾಲ್ಕು ದಿನಗಳಲ್ಲಿ ರಚಿಸುವ ಸಾಧ್ಯತೆಯಿದೆ. ಜಿಲ್ಲಾ ಮಟ್ಟದ ಸಮಿತಿಗಳು ಅಭ್ಯರ್ಥಿಗಳ ಆಯ್ಕೆ ಹಾಗೂ ಪಂಚಾಯಿತಿ ಚುನಾವಣೆಗಳ ಸಿದ್ಧತೆಯ ಜವಾಬ್ದಾರಿ ನಿರ್ವಹಿಸಲಿವೆ.

ರಾಜ್ಯಮಟ್ಟದ ಸಮಿತಿಯಲ್ಲಿ ಬಿಜೆಪಿಯ ಐವರು ಹಾಗೂ ಜೆಡಿಎಸ್‌ನ ನಾಲ್ವರು ಸದಸ್ಯರು ಇರುವ ಸಾಧ್ಯತೆಯಿದೆ. ಇದೇ ಮಾದರಿಯನ್ನು ಜಿಲ್ಲಾ ಸಮಿತಿಗಳಲ್ಲೂ ಅನುಸರಿಸುವ ನಿರೀಕ್ಷೆಯಿದೆ.

ಆದರೆ, ಆಯಾ ಜಿಲ್ಲೆಗಳಲ್ಲಿ ಎರಡೂ ಪಕ್ಷಗಳ ಬಲಾಬಲವನ್ನು ಆಧರಿಸಿ ಸಮಿತಿಗಳ ಸದಸ್ಯರ ಸಂಖ್ಯೆಯನ್ನು ನಿರ್ಧರಿಸಲಾಗುತ್ತದೆ. ಕೆಲವು ಜಿಲ್ಲೆಗಳಲ್ಲಿ ಬಿಜೆಪಿ ಪ್ರಬಲವಾಗಿದ್ದರೆ, ಇನ್ನು ಕೆಲವು ಜಿಲ್ಲೆಗಳಲ್ಲಿ ಜೆಡಿಎಸ್ ಹೆಚ್ಚಿನ ಪ್ರಾಬಲ್ಯ ಹೊಂದಿದೆ. ಹೀಗಾಗಿ ಯಾವ ಪಕ್ಷ ಹೆಚ್ಚು ಪ್ರಬಲವಾಗಿದೆಯೋ ಆ ಪಕ್ಷಕ್ಕೆ ಜಿಲ್ಲಾ ಸಮಿತಿಗಳಲ್ಲಿ ಹೆಚ್ಚಿನ ಪ್ರಾತಿನಿಧ್ಯ ನೀಡಲಾಗುತ್ತದೆ ಎಂದು ಜೆಡಿಎಸ್‌ನ ಹಿರಿಯ ನಾಯಕರೊಬ್ಬರು ತಿಳಿಸಿದ್ದಾರೆ.

ಏತನ್ಮಧ್ಯೆ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ಬಿಜೆಪಿ ಜೊತೆಗಿನ ತಮ್ಮ ಪಕ್ಷದ ಮೈತ್ರಿ ದೀರ್ಘಕಾಲ ಮುಂದುವರಿಯಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.





"ಎರಡು ಉಪಚುನಾವಣೆಗಳು ಮತ್ತು ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಅನುಸರಿಸಬೇಕಾದ ಕಾರ್ಯತಂತ್ರದ ಕುರಿತು ಚರ್ಚಿಸಿದ್ದೇವೆ. ನಮ್ಮ ಕೇಂದ್ರ ನಾಯಕರೊಂದಿಗೆ ಸಮಾಲೋಚನೆ ನಡೆಸಿದ ಬಳಿಕ ಅಭ್ಯರ್ಥಿಗಳನ್ನು ಅಂತಿಮಗೊಳಿಸಲಾಗುವುದು."

■ ಆರ್.ಅಶೋಕ
ವಿಧಾನಸಭೆಯ ವಿರೋಧ ಪಕ್ಷದ ನಾಯಕ

ಕಾಂಗ್ರೆಸ್ ಪಕ್ಷವನ್ನು ಅಧಿಕಾರದಿಂದ ಕೆಳಗಿಳಿಸಲು ನಾವು ಒಟ್ಟಾಗಿ ಕೆಲಸ ಮಾಡುತ್ತೇವೆ ಎಂದು ಅವರು ಹೇಳಿದ್ದಾರೆ.

ಹಿರಿಯೂರುವಿಧಾನಸಭಾಕ್ಷೇತ್ರದಉಪಚುನಾವಣೆಯಲ್ಲಿ ಎನ್‌ಡಿಎ ಅಭ್ಯರ್ಥಿ ಸ್ಪರ್ಧಿಸಲಿದ್ದಾರೆ. ಮೈತ್ರಿಕೂಟದ ಗೆಲುವಿಗಾಗಿ ಬಿಜೆಪಿ ಮತ್ತು ಜೆಡಿಎಸ್ ಒಗ್ಗಟ್ಟಿನಿಂದ ಕೆಲಸ ಮಾಡಲಿವೆ ಎಂದು ಅವರು ತಿಳಿಸಿದ್ದಾರೆ.

ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಸಂಬಂಧಿಸಿದಂತೆ ಕ್ಷೇತ್ರ ಹಂಚಿಕೆ ಸೂತ್ರವನ್ನು ಅಂತಿಮಗೊಳಿಸಲು ಬಿಜೆಪಿ ಕೇಂದ್ರ ನಾಯಕರೊಂದಿಗೆ ಸಮಾಲೋಚನೆ ನಡೆಸುವ ಸಾಧ್ಯತೆಯಿದೆ. ಬೆಳಗಾವಿಯಲ್ಲಿ ವಿಧಾನಮಂಡಲದ ಚಳಿಗಾಲದ ಅಧಿವೇಶನ ಆರಂಭವಾಗುವ ಮುನ್ನವೇ ಈ ಪ್ರಕ್ರಿಯೆ ಪೂರ್ಣಗೊಳಿಸುವ ಉದ್ದೇಶವಿದೆ ಎಂದು ಸಭೆಯಲ್ಲಿ ಭಾಗವಹಿಸಿದ್ದ ನಾಯಕರು ತಿಳಿಸಿದ್ದಾರೆ. ಸಭೆಯಲ್ಲಿ ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಸೇರಿದಂತೆ ಎರಡೂ ಪಕ್ಷಗಳ ಹಿರಿಯ ನಾಯಕರು ಭಾಗವಹಿಸಿದ್ದರು.

15 ದಿನಗಳ ಕಾಲ ಅಧಿವೇಶನ ನಡೆಸಲು ಪ್ರತಿಪಕ್ಷಗಳ ಒತ್ತಾಯ



ಏತನ್ಮಧ್ಯೆ ಬೆಳಗಾವಿಯಲ್ಲಿ ನಡೆಯಲಿರುವ ವಿಧಾನಮಂಡಲದ ಚಳಿಗಾಲದ ಅಧಿವೇಶನವನ್ನು 15 ದಿನಗಳ ಕಾಲ ನಡೆಸಬೇಕು ಎಂದು ಆರ್.ಅಶೋಕ ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಉತ್ತರ ಕರ್ನಾಟಕದ ಹಲವು ಪ್ರಮುಖ ಸಮಸ್ಯೆಗಳ ಕುರಿತು ಸಮಗ್ರ ಚರ್ಚೆ ನಡೆಸಲು ಹೆಚ್ಚಿನ ಸಮಯದ ಅಗತ್ಯವಿದೆ ಎಂದು ಹೇಳಿದ್ದಾರೆ.

ನೈಸ್ ಯೋಜನೆ ಹಗರಣ, ಬಿಡದಿಯಲ್ಲಿ ಪ್ರಸ್ತಾಪಿತವಾಗಿರುವ ಟೌನ್‌ಶಿಪ್, ಕೆಪಿಎಸ್‌ಸಿ ನೇಮಕಾತಿ ಅಕ್ರಮ, ಬರಪೀಡಿತ ರೈತರಿಗೆ ನೀಡಬೇಕಾದ 2,500 ರೂ. ಪರಿಹಾರ ವಿತರಣೆಯಲ್ಲಿನ ವಿಳಂಬ ಹಾಗೂ ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳಿಗೆ ಮೂರು ತಿಂಗಳಿನಿಂದ ಹಣ ಪಾವತಿಸದಿರುವುದು ಸೇರಿದಂತೆ ಹಲವು ವಿಷಯಗಳನ್ನು ಮುಂದಿಟ್ಟುಕೊಂಡು ಅಧಿವೇಶನದಲ್ಲಿ ಸರ್ಕಾರವನ್ನು ತರಾಟೆಗೆ ತೆಗೆದುಕೊಳ್ಳಲು ಪ್ರತಿಪಕ್ಷಗಳು ಸಿದ್ಧತೆ ನಡೆಸಿವೆ.

ಕನಕದಾಸರ ಆದರ್ಶಗಳು ಬದುಕಿಗೆ ದಾರಿದೀಪ :ಡಾ.ಔದ್ರಾಮ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಭಕ್ತಿ ಪರಂಪರೆಯಲ್ಲಿ ವಿಶಿಷ್ಟ ಸ್ಥಾನ ಹೊಂದಿರುವ ಕನಕದಾಸರು ಭಕ್ತಿ, ಮಾನವೀಯತೆ ಮತ್ತು ಸಮಾನತೆಯ ಮೌಲ್ಯಗಳನ್ನು ತಮ್ಮ ಬದುಕು ಹಾಗೂ ಸಾಹಿತ್ಯದ ಮೂಲಕ ಸಮಾಜಕ್ಕೆ ಪರಿಚಯಿಸಿದ ಮಹಾನ್ ಚೇತನರು. ಅವರ ಆದರ್ಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಂಡು ಮುನ್ನಡೆಯಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ.ಔದ್ರಾಮ ಹೇಳಿದರು.

ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಭಕ್ತಶ್ರೇಷ್ಠ ಕನಕದಾಸರ ಜಯಂತಿ ಕಾರ್ಯಕ್ರಮಕ್ಕೆ ಪಾಲ್ಗೊಂಡು ಅವರು ಮಾತನಾಡಿದರು.

ಕನಕದಾಸರು ಭಕ್ತಿ ಮತ್ತು ಮಾನವೀಯತೆಯ ಸಮ್ಮಿಲನವಾಗಿದ್ದು, ಅವರ ವ್ಯಕ್ತಿತ್ವದಲ್ಲಿ ದೈವಿಕ ಚಿಂತನೆ ಹಾಗೂ ಮಾನವತಾವಾದದ ಉನ್ನತ ಮೌಲ್ಯಗಳು ಮೇಳೈಸಿವೆ. ದೇವರ ಭಕ್ತಿಯೊಂದಿಗೆ ಮನುಕುಲದ ಒಳಿತನ್ನು ಬಯಸಿದ ಅವರು, ಸಮಾಜಕ್ಕೆ ಆದರ್ಶಪ್ರಾಯವಾದ ಜೀವನ ನಡೆಸಿದ್ದಾರೆ. ಇಂತಹ ಮಹಾನ್ ಚೇತನರ ಜಯಂತಿ ಆಚರಣೆಯಲ್ಲಿ ಭಾಗವಹಿಸುವ ಅವಕಾಶ ದೊರೆತಿರುವುದು ನಮ್ಮೆಲ್ಲರ ಸೌಭಾಗ್ಯವಾಗಿದೆ ಎಂದರು. ಉಪನ್ಯಾಸಕ ದಳವಾಯಿ ಅವರು, ಕನಕದಾಸರು ತಮ್ಮ ಸಾಹಿತ್ಯ ಮತ್ತು ಕೀರ್ತನೆಗಳ ಮೂಲಕ ಜಾತಿ ವ್ಯವಸ್ಥೆ ಹಾಗೂ ಸಾಮಾಜಿಕ ಅಸಮಾನತೆಗಳನ್ನು ಪ್ರಶ್ನಿಸಿ, ಸಮಾನತೆ, ಮಾನವೀಯತೆ ಮತ್ತು ಭಕ್ತಿಯ ಮೌಲ್ಯಗಳನ್ನು ಪ್ರತಿಪಾದಿಸಿದ ಮಹಾನ್ ಸಂತರು. ಅವರ ವಿಚಾರಧಾರೆಗಳು ಇಂದಿನ ಸಮಾಜಕ್ಕೂ ಪ್ರಸ್ತುತವಾಗಿವೆ ಎಂದು ಹೇಳಿದರು.



ಕಾರ್ಯಕ್ರಮದಲ್ಲಿ ಮೇಯರ್ ಮಡಿವಾಳಪ್ಪ ಕರಡಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ವಸಂತ ಹೊನಮೊಡೆ, ಪಾಲಿಕೆ ಸದಸ್ಯರಾದ ಪ್ರೇಮಾನಂದ ಬಿರಾದಾರ, ರಾಹುಲ್ ಜಾಧವ, ಮುಖ್ಯ ಯೋಜನಾಧಿಕಾರಿ ಸಿ.ಬಿ. ಕುಂಬಾರ, ಡಿವೈಎಸ್ಪಿ ಉಪಾಸೆ,ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಹನುಮಂತ ಕಾಲತೀಪಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಂತೋಷ ಭೋವಿ, ಕ್ರೀಡಾಧಿಕಾರಿ ರಾಜಶೇಖರ ದೈವಾಡಿ, ಜವಾಹರ ಗೋಸ್ವಾಮಿ, ಸೋಮನಗೌಡ ಕಲ್ಲೂರ ಹಾಗೂ ಗಿರೀಶ ಕುಲಕರ್ಣಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಿಬ್ಬಂದಿ ಮತ್ತು ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಕನಕದಾಸರ ಭಾವಚಿತ್ರದ ಮೆರವಣಿಗೆ

ಕಾರ್ಯಕ್ರಮಕ್ಕೂ ಮೊದಲು ಭಕ್ತಶ್ರೇಷ್ಠ ಕನಕದಾಸರ ಭಾವಚಿತ್ರದ ಮೆರವಣಿಗೆಯು ನಗರದ ಶ್ರೀ ಸಿದ್ದೇಶ್ವರ ದೇವಸ್ಥಾನದ ಆವರಣದಿಂದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದವರೆಗೆ ಜರುಗಿತು.

ಸ್ಥಳ ಪರಿಶೀಲಿಸಿ ನಿರ್ಮಾಣ | ಶಾಸಕ ಶಿವಾನಂದ ಪಾಟೀಲ ಭರವಸೆ | ಸುಳ್ಳು ಸುದ್ದಿಗೆ ಕಿವಿಗೊಡದಿರಲು ಉಪಾಧ್ಯಕ್ಷ ಬಸವರಾಜ ವಂದಾಲ ಮನವಿ

ಎಲ್ಲ ಕಚೇರಿಗಳು ನಿಡಗುಂದಿಯಲ್ಲಿಯೇ ನಿರ್ಮಾಣ

■ ಉದಯರಶ್ಮಿ ದಿನಪತ್ರಿಕೆ

ನಿಡಗುಂದಿ: ಮಿನಿ ವಿಧಾನಸೌಧ ಸೇರಿದಂತೆ ನಾನಾ ಕಚೇರಿಗಳನ್ನು ನಿಡಗುಂದಿ ಪಟ್ಟಣದಲ್ಲಿಯೇ ಸ್ಥಳ

ಮನೆಯಲ್ಲಿ ವಿಜ್ಞಾನ



ಚಿಕ್ಕಂದಿನಲ್ಲಿ ಮಕ್ಕಳಿಗೆ ಪಾಠಗಳನ್ನು ನಾವು ಕಲಿಸಿಕೊಡಲೇಬೇಕು. ನಾವು ಆಗ ಕಲಿಸಿಕೊಡದೆ ಇದ್ದರೆ ಮುಂದೆ ಮಕ್ಕಳು ತಮ್ಮ ಟೀಚರ್ ಹೇಳಿರುವುದನ್ನೆ ಸರಿ ಎಂದು ಪಾಲಕರು ಹೇಳುವ ವಿಷಯಗಳು ತಪ್ಪು ಎಂದು ಹೇಳುವ ಸಾಧ್ಯತೆಗಳು ಬಹಳ ಇರುತ್ತದೆ. ಇದಕ್ಕೆ ಕಾರಣ ಪಾಲಕರು ಎಂದರೆ ತಪ್ಪಿಲ್ಲ. ಚಿಕ್ಕಂದಿನಲ್ಲಿ ಮಕ್ಕಳಿಗೆ ಎಲ್ಲ ವಿಷಯಗಳ ಅರಿವನ್ನು ಮೂಡಿಸಲು ಪಾಲಕರು ಪ್ರಯತ್ನಿಸಲೇಬೇಕು.

■ ಉದಯರಶ್ಮಿ ದಿನಪತ್ರಿಕೆ

ನಮ್ಮ ಸುತ್ತಲಿನ ಪ್ರಕೃತಿಯನ್ನು ನಾವು ಸದಾ ನೋಡುತ್ತಿದ್ದು ಅದರಲ್ಲಿ ಆಗುವ ಬದಲಾವಣೆಗಳನ್ನು ಗಮನಿಸುತ್ತಲೇ ಇರುತ್ತೇವೆ. ಹಾಗೆಯೇ ನಮ್ಮ ಈ ಶರೀರವನ್ನು ಕೂಡ ನಾವು ಗಮನಿಸಲೇಬೇಕು. ನಮ್ಮ ದೇಹದೊಳಗಿರುವ ಅಂಗಗಳ ಕಾರ್ಯನಿರ್ವಹಣೆ, ಶರೀರದಲ್ಲಾಗುವ ಬದಲಾವಣೆಗಳನ್ನು ಕೂಡ ನಾವು ಅರಿಯಲೇಬೇಕು. ದೇಹದ ವೈಜ್ಞಾನಿಕ ಸತ್ಯದ ಅರಿವು ನಮಗೆ ಇರಬೇಕು.

ನಾವು ತಿನ್ನುಣ್ಣುವ ಆಹಾರದ ಹಿಂದೆ ನೂರಾರು ಜನರ ಶ್ರಮವಿದೆ. ನಮ್ಮ ತಟ್ಟೆಗೆ ಬಂದು ಬೀಳುವ ಆಹಾರದ ಹಿಂದೆ ಒಬ್ಬ ರೈತನ ಶ್ರಮವಿದ್ದು ಹದವಾದ ಮಳೆ ಬೀಳುವ ಮುನ್ನವೇ ತನ್ನ ಹೊಲವನ್ನು ತಯಾರಿಸಿ ಇಟ್ಟುಕೊಳ್ಳುವ ರೈತ ಒಂದು ಪುಟ್ಟ ಮಳೆಯಾದೊಡನೆ ಆಯ್ದ ಬೀಜಗಳನ್ನು ಹೊಲದಲ್ಲಿ ಬಿತ್ತುತ್ತಾನೆ. ನೀರು ಹಾಯಿಸುತ್ತಾನೆ, ಕಳೆ ತೆಗೆಯುತ್ತಾನೆ, ಹುಲುಸಾದ ಬೆಳೆಯನ್ನು ಕಣ್ಣಲ್ಲಿ ಕಣ್ಣಿಟ್ಟು ಕಾಯುತ್ತಾ ಹಕ್ಕಿ ಪಕ್ಷಿಗಳು ತೆನೆಯನ್ನು ಹಾಳುಗೆಡವದಂತೆ, ಹುಳು ಹುಪ್ಪಟೆಗಳು ಬೀಳದಂತೆ ಗೊಬ್ಬರ, ರಾಸಾಯನಿಕಗಳನ್ನು ಬಳಸಿ ರಕ್ಷಿಸುತ್ತಾನೆ. ನಂತರ ಬೆಳೆದ ಬೆಳೆಯನ್ನು ತೆನೆ ಮುರಿದು ರಾಶಿ ಮಾಡಿ ಚೀಲಗಳಲ್ಲಿ ತುಂಬಿ ಕೃಷಿ ಉತ್ಪನ್ನ ಮಾರುಕಟ್ಟೆಗೆ ತಂದು ಮಾರುವ ಮತ್ತು



ನಾವು ಅದನ್ನು ಕೊಳ್ಳುವ ಹಸನು ಮಾಡುವ ಹಿಟ್ಟು ಮಾಡಿ ಜರಡಿಯಾಡಿ ಅದನ್ನು ರೊಟ್ಟಿ ಮಾಡಿ, ಆ ರೊಟ್ಟಿ ನಮ್ಮ ತಟ್ಟೆಗೆ ಬಂದು ಬೀಳುವ ಮಧ್ಯದಲ್ಲಿ ನೂರಾರು ಜನರ ಬೆವರಿನ ಶ್ರಮವಿರುತ್ತದೆ ಆದ್ದರಿಂದ ನಾವು ನಮಗೆ ಕಿಂಚಿತ್ ಸಹಾಯ ಮಾಡಿದ ವ್ಯಕ್ತಿಯ ಕುರಿತು ಕೂಡ ಅಷ್ಟೇ ಕೃತಜ್ಞತಾ ಭಾವವನ್ನು ಯಾವಾಗಲೂ ಹೊಂದಿರಲೇಬೇಕು.

ನಮ್ಮ ಬದುಕಿನಲ್ಲಿ ಸಾಮಾನ್ಯ ಜ್ಞಾನದ ಜೊತೆ ವಿಜ್ಞಾನವು ಬೆರೆತಿದೆ. ನಮಗೆ ಗೊತ್ತಿಲ್ಲದೆ ನಾವು ವೈಜ್ಞಾನಿಕವಾಗಿ ಕಾರ್ಯನಿರ್ವಹಿಸುತ್ತವೆ. ಒಂದು ಕಪ್ ನೀರಿಗೆ ಮೂರು ಚಮಚ ಚಹಾ ಪುಡಿ ಹಾಕಿ ಕುದಿಸಿದಾಗ ಚಹಾ ತುಸು ಒಗರು, ಕಹಿ ಎನಿಸುತ್ತದೆ. ಹಾಗೆಂದು ಚಹಾದಲ್ಲಿರುವ ಕಹಿಯನ್ನು ತೆಗೆಯಲು ಸಾಧ್ಯವೇ ಎಂದರೆ ವೈಜ್ಞಾನಿಕವಾಗಿ ಅದು ಕೂಡ ಸಾಧ್ಯವಿಲ್ಲ ಕಾರಣ ಚಹಾದ ಎಸರಿನಲ್ಲಿರುವ ಒಗರುತನವನ್ನು ಕಡಿಮೆ ಮಾಡಬೇಕೆಂದರೆ ಅದಕ್ಕೆ ನೀರನ್ನು ಹಾಕಬೇಕು. ಹಾಲನ್ನು ಹಾಕಿದರೆ ಮತ್ತಷ್ಟು ತಟಸ್ಥಗೊಳಿಸಬಹುದು. ಇಲ್ಲಿ ಚಹಾ ಪುಡಿ ಆಸಿಡ್ನಂತೆ(ಆಮ್ಲ) ಕಾರ್ಯನಿರ್ವಹಿಸಿದರೆ ನೀರು(ಪ್ರತ್ಯಾಮ್ಲ) ಬೇಸನಂತೆ ವರ್ತಿಸುತ್ತದೆ ಮತ್ತು ಹಾಲು ತಟಸ್ಥತೆಯನ್ನು ತೋರುತ್ತದೆ.

ಸಾಂಬಾರ್ ನಲ್ಲಿ ಗಟ್ಟಿಯಾದ ಬೇಳೆಯ ಗಸಿ ಮತ್ತು ತರಕಾರಿ ಹೋಳುಗಳು ತಳದಲ್ಲಿ ಇದ್ದರೆ ಮೇಲೆ ತಿಳಿಯಾದ ನೀರು ನಿಂತಿರುತ್ತದೆ... ಇದರ ಮೂಲಕ ನಾವು ಸ್ಥಿತಿಸ್ಥಾಪಕತ್ವವನ್ನು ಕಲಿಯಬಹುದು. ಇನ್ನು ಘನಪದಾರ್ಥವಾದ ಸಿಲಿಂಡರ್ ನಲ್ಲಿ ದ್ರವೀಕೃತ ಅನಿಲವನ್ನು ಸೇರಿಸಿದ್ದು ಗ್ಯಾಸ್ ಅನ್ನು ಆನ್ ಮಾಡಿದಾಗ ಅನಿಲವು ಇಂಧನದ ರೂಪದಲ್ಲಿ ಹೊರಹೊಮ್ಮುತ್ತದೆ.. ಇದು ನಮ್ಮ ವಿಜ್ಞಾನದಲ್ಲಿ ಘನ ದ್ರವ ಮತ್ತು ಅನಿಲದ ಸ್ಥಿತಿಗಳನ್ನು ತೋರಲು ಅನುಕೂಲ ಅಲ್ಲವೇ?

ನಮ್ಮ ಆರೋಗ್ಯವನ್ನು ಕಾಯಲು ನಾವು ಸೇವಿಸುವ ಆಹಾರದಲ್ಲಿ ಪ್ರೋಟೀನ್, ವಿಟಮಿನ್, ಕ್ಯಾಲ್ಸಿಯಂ ಮತ್ತು ಹಸಿರು ತರಕಾರಿಗಳು





ಅತ್ಯವಶ್ಯಕ.. ನಮ್ಮ ತಟ್ಟೆಯಲ್ಲಿ ಇರುವ ತರಕಾರಿ ಕಾಳು ಬೇಳೆ ಹಸಿರು ತಪ್ಪಲು ಪಲ್ಯಗಳು ನಮ್ಮ ಆಹಾರದ ತಟ್ಟೆಯಲ್ಲಿ ನಮಗೆ ಸಿಗುತ್ತವೆ ಅಲ್ಲವೇ?

ಅಡುಗೆ ಮನೆಯಲ್ಲಿ ನಾವು ಆವಿಯಾಗುವುದು, ಕುದಿಯುವುದು ಕಾಯಿಸುವುದು ಹೀಗೆ ಹತ್ತು ಹಲವು ವೈಜ್ಞಾನಿಕ ಸಂಗತಿಗಳನ್ನು ಕಲಿಯುತ್ತೇವೆ.

ಚಿಕ್ಕಂದಿನಲ್ಲಿ ಮಕ್ಕಳಿಗೆ ಪಾಠಗಳನ್ನು ನಾವು ಕಲಿಸಿಕೊಡಲೇಬೇಕು. ನಾವು ಆಗ ಕಲಿಸಿಕೊಡದೆ ಇದ್ದರೆ ಮುಂದೆ ಮಕ್ಕಳು ತಮ್ಮ ಟೀಚರ್ ಹೇಳಿರುವುದನ್ನೆ ಸರಿ ಎಂದು ಪಾಲಕರು ಹೇಳುವ ವಿಷಯಗಳು ತಪ್ಪು ಎಂದು ಹೇಳುವ ಸಾಧ್ಯತೆಗಳು ಬಹಳ ಇರುತ್ತದೆ. ಇದಕ್ಕೆ ಕಾರಣ ಪಾಲಕರು ಎಂದರೆ ತಪ್ಪಿಲ್ಲ. ಚಿಕ್ಕಂದಿನಲ್ಲಿ ಮಕ್ಕಳಿಗೆ ಎಲ್ಲ ವಿಷಯಗಳ ಅರಿವನ್ನು ಮೂಡಿಸಲು ಪಾಲಕರು ಪ್ರಯತ್ನಿಸಲೇಬೇಕು.

ಸ್ವಾಂತಂತ್ರ್ಯ ಸಂಗ್ರಾಮದ ಸಂತ ಶ್ರೀ ಸ್ವಾಮಿ ರಮಾನಂದ ತೀರ್ಥರು

■ ಉದಯರಶ್ಮಿ ದಿನಪತ್ರಿಕೆ







ಸ್ವಾಮಿ ರಮಾನಂದ ತೀರ್ಥರು (1903 1972) ಭಾರತದ ಪ್ರಮುಖ ಸ್ವಾತಂತ್ರ್ಯ ಹೋರಾಟಗಾರರು, ಶಿಕ್ಷಣ ತಜ್ಞರು ಮತ್ತು ಸಮಾಜ ಸುಧಾರಕರಾಗಿದ್ದು, ನಿಜಾಮರ ಆಳ್ವಿಕೆಯಲ್ಲಿದ್ದ ಹೈದರಾಬಾದ್ ಸಂಸ್ಥಾನದ ವಿಮೋಚನಾ ಹೋರಾಟದ ನೇತೃತ್ವ ವಹಿಸಿದ್ದರು.

ಆರಂಭಿಕ ಜೀವನ ಮತ್ತು ಶಿಕ್ಷಣ

ಜನನ: ಇವರು 1903 ಅಕ್ಟೋಬರ್ 3 ರಂದು ಕರ್ನಾಟಕದ ವಿಜಯಪುರ ಜಿಲ್ಲೆಯ ಸಿಂದಗಿಯಲ್ಲಿ ಜನಿಸಿದರು. ಇವರ ತಂದೆ ಭವಾನಿರಾವ್ ಖೇಡಗಿಕರ್.

ಹೈದರಾಬಾದ್ ವಿಮೋಚನಾ ಹೋರಾಟ ಮತ್ತು ರಾಜಕೀಯ

ಹೋರಾಟದ ನಾಯಕತ್ವ: ಹೈದರಾಬಾದ್ ನಿಜಾಮ ಉಸ್ಮಾನ್ ಅಲಿ ಖಾನ್ ಅವರ ದಬ್ಬಾಳಿಕೆಯ ಆಡಳಿತದ ವಿರುದ್ಧ ಜನಜಾಗೃತಿ ಮೂಡಿಸಿದರು. 1947ರಲ್ಲಿ ಹೈದರಾಬಾದ್ ರಾಜ್ಯ ಕಾಂಗ್ರೆಸ್ ಅಧ್ಯಕ್ಷರಾಗಿ ಆಯ್ಕೆಯಾಗಿ, ಹೈದರಾಬಾದ್ ಸಂಸ್ಥಾನವನ್ನು ಭಾರತ ಒಕ್ಕೂಟದಲ್ಲಿ ವಿಲೀನಗೊಳಿಸಲು ನಡೆದ ಹೋರಾಟವನ್ನು ಮುನ್ನಡೆಸಿದರು.

ಸೆರೆವಾಸ: ಸತ್ಯಾಗ್ರಹಗಳಲ್ಲಿ ಪಾಲ್ಗೊಂಡ ಕಾರಣಕ್ಕೆ ನಿಜಾಮನ ಸರ್ಕಾರದಿಂದ ಬಂಧಿಸಲ್ಪಟ್ಟು ಸೆರೆವಾಸ ಅನುಭವಿಸಿದರು.


ನಿಜಾಮಶಾಹಿ ತನ್ನ ಪ್ರಾಂತದಲ್ಲಿ ಕಾಂಗ್ರೆಸ್ ಸಂಘಟನೆ ನಿಷೇಧಿಸಿದ್ದ ಕಾಲದಲ್ಲಿ ಹೈದ್ರಾಬಾದ್ ವಿಮೋಚನೆಗಾಗಿ ಪ್ರತ್ಯೇಕವಾಗಿ ರಚನೆಯಾಗಿದ್ದ ಕರ್ನಾಟಕ ಪರಿಷತ್, ಆಂಧ್ರಪರಿಷತ್ ಮರಾಠ ಪರಿಷತ್ ಗಳನ್ನು ಒಂದುಗೂಡಿಸಿ ಕಾಂಗ್ರೆಸ್ ಸ್ಥಾಪನೆ ಮಾಡಿದ ಅವರು ಹೈದ್ರಾಬಾದ್ ನಿಜಾಮ್ ಶಾಹಿ ಹಾಗೂ ರಜಕಾರರ ದಬ್ಬಾಳಿಕೆಯ ವಿರುದ್ಧ ತೀವ್ರ ಹೋರಾಟ ನಡೆಸಿ ಜನರನ್ನು ಒಗ್ಗೂಡಿಸಿದರು. ಈ ಹೋರಾಟಕ್ಕಾಗಿ ಹಲವು ಬಾರಿ ಸೆರೆಮನೆವಾಸ ಅನುಭವಿಸಿದರು. 1948 ಸೆಪ್ಟೆಂಬರ್ 17 ರಂದು ಹೈದ್ರಾಬಾದ್ ಪ್ರಾಂತ ವಿಮೋಚನೆಗೊಂಡಿರುವುದರಲ್ಲಿ ಸ್ವಾಮಿ ರಾಮಾನಂದ ತೀರ್ಥರ ಪಾತ್ರ ದೊಡ್ಡದಾಗಿದೆ. ಸ್ವಾತಂತ್ರ್ಯದ ನಂತರ 1952ರಲ್ಲಿ ಗುಲ್ಬರ್ಗಾ ಕ್ಷೇತ್ರದಿಂದ 1957ರಿಂದ 1962 ರ ವರೆಗೆ ಔರಂಗಬಾದ ಕ್ಷೇತ್ರದಿಂದ ಲೋಕಸಭಾ ಸದಸ್ಯರಾಗಿ ರಾಷ್ಟ್ರಕ್ಕೆ ತಮ್ಮ ಸೇವೆ ಸಲ್ಲಿಸಿರುವ ಸ್ವಾಮೀಜಿ ಅವರು ಭಾಷವಾರು ಪ್ರಾಂತ ರಚನೆ ವಿಷಯವನ್ನು ಮೊದಲಿಗೆ ಪ್ರಸ್ತಾಪಿಸಿ ಆಂಧ್ರ ಪ್ರದೇಶ, ಕರ್ನಾಟಕ, ಮಹಾರಾಷ್ಟ್ರ ರಾಜ್ಯಗಳು ಸೇರಿ ದೇಶದಲ್ಲಿ ಭಾಷಾವಾರು ರಾಜ್ಯಗಳ ರಚನೆಯಲ್ಲಿ ಪ್ರಮುಖ ಪಾತ್ರವಹಿಸಿದ್ದಾರೆ.ದೇಶದ ಸಮಗ್ರತೆ ಮತ್ತು ಏಕತೆ ಮತ್ತು ಅಭಿವೃದ್ಧಿಯ ಕನಸು ಕಂಡಿದ್ದ ಸ್ವಾಮಿ ರಾಮಾನಂದರು ಸ್ವಾತಂತ್ರ್ಯ ನಂತರ ಕಾಂಗ್ರೆಸ್ ಪಕ್ಷದ ಸುಧಾರಣೆ ಬಯಸಿದ್ದರು.



ರಾಷ್ಟ್ರ ರಾಜಕಾರಣದ ಬೆಳವಣಿಗೆಗಳಿಂದ ವಿಮುಖರಾಗಿ ನಂತರ ರಾಜಕೀಯ ಚಟುವಟಿಕೆಯಿಂದ ದೂರ ಉಳಿದಿದ್ದರು. ಸಾಮಾಜಿಕ ಮತ್ತು ಗ್ರಾಮೀಣ ಅಭಿವೃದ್ಧಿಗಾಗಿ ತಮ್ಮ ಇಡಿ ಜೀವನವನ್ನು ಮುಡಿಪಾಗಿಟ್ಟು ರಾಷ್ಟ್ರ ಸೇವೆಗೆ ತಮ್ಮನ್ನು ತಾವು ಸಮರ್ಪಣೆ ಮಾಡಿಕೊಂಡಿದ್ದರು.ಹೈದ್ರಾಬಾದದಲ್ಲಿ ನೆಲೆಸಿದ್ದ ಸ್ವಾಮೀಜಿ ಅವರು 22 ಜನವರಿ 1972 ರಂದು ನಿಧನ ಹೊಂದಿದರು. ಹೈದರಾಬಾದನ ಬೇಗಂ ಪೇಟದಲ್ಲಿ ಅವರ ಅಂತ್ಯಕ್ರಿಯೆ ನಡೆಸಿದ ಸ್ಥಳವನ್ನು ಸ್ಮಾರಕವಾಗಿ ನಿರ್ಮಾಣ ಮಾಡಿ ಅವರಿಗೆ ಗೌರವ ಸಲ್ಲಿಸಲಾಗಿದೆ.ಸ್ವಾಮಿ ರಾಮಾನಂದರ ಹೆಸರಲ್ಲಿ ಮಹಾರಾಷ್ಟ್ರದ ನಾಂದೇಡದಲ್ಲಿ ಸ್ವಾಮಿ ರಾಮಾನಂದ ತೀರ್ಥ ಮರಾಠವಾಡ ವಿಶ್ವ ವಿದ್ಯಾಲಯ ಸ್ಥಾಪಿಸಲಾಗಿದೆ ಹೈದ್ರಾಬಾದ್ ಪ್ರಾಂತದ ಹಲವೆಡೆ ಅವರ ಹೆಸರಲ್ಲಿ ಹಲವು ಸಂಘ ಸಂಸ್ಥೆಗಳು ಕಾರ್ಯ ನಿರ್ವಹಿಸುತ್ತಿವೆ.

ಸಿಂದಗಿಯಲ್ಲಿ ಅವರು ಹುಟ್ಟಿದ ಮನೆಯನ್ನು ಖರೀದಿ ಮಾಡಿ ಕರ್ನಾಟಕ ಸರಕಾರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ 2006 ರಲ್ಲಿ ಸ್ಮಾರಕ ಭವನವಾಗಿ ನಿರ್ಮಾಣ ಮಾಡಿದ್ದಾರೆ. ರೂವಾರಿ ದೇಶದ ಅಗ್ರಗಣ್ಯ ನಾಯಕರಾದ ಸ್ವಾಮಿ ರಾಮಾನಂದ ತೀರ್ಥರ ಸಲ್ಲಿಸಿದ ಸೇವೆ ನಿಜಕ್ಕೂ ಅನುಕರಣೀಯ ಮತ್ತು ಅನುಪಮಶೀಲವಾಗಿದೆ.

ನಿಧನ ಮತ್ತು ಸ್ಮರಣೆ





ಪೂರ್ವಾಶ್ರಮದ ಹೆಸರು: ಸನ್ಯಾಸ ಸ್ವೀಕರಿಸುವ ಮೊದಲು ಇವರ ಹೆಸರು ವೆಂಕಟೇಶ ಭವಾನಿರಾವ್ ಖೇಡಗಿಕರ್ ಎಂದಿತ್ತು.

ವಿದ್ಯಾಭ್ಯಾಸ: ಪ್ರಾಥಮಿಕ ಶಿಕ್ಷಣವನ್ನು ದೇವಳ ಗಾಣಗಾಪುರದಲ್ಲಿ ಪೂರ್ಣಗೊಳಿಸಿದ ಇವರು, ಸೊಲ್ಲಾಪುರದ ನಾರ್ಥ್‌ಕೋಟ್ ಮಾಧ್ಯಮಿಕ ಶಾಲೆ ಹಾಗೂ ಪುಣೆಯ ತಿಲಕ್ ವಿದ್ಯಾಪೀಠದಿಂದ ಸ್ನಾತಕೋತ್ತರ (ಎಂ.ಎ.) ಪದವಿ ಪಡೆದರು.

ಸನ್ಯಾಸ ದೀಕ್ಷೆ ಮತ್ತು ಶಿಕ್ಷಣ ಸೇವೆ

ಶಿಕ್ಷಕರಾಗಿ ಸೇವೆ: ಕಾರ್ಮಿಕ ನಾಯಕ ಎನ್.ಎಂ. ಜೋಶಿ ಅವರೊಂದಿಗೆ ಕೆಲಕಾಲ ಕಾರ್ಮಿಕ ಚಳವಳಿಯಲ್ಲಿ ಭಾಗವಹಿಸಿದ ನಂತರ, ಅನಾರೋಗ್ಯದ ಕಾರಣದಿಂದ ಶಿಕ್ಷಣ ಕ್ಷೇತ್ರಕ್ಕೆ ಮರಳಿದರು. ಮಹಾರಾಷ್ಟ್ರದ ಹಿಪ್ಪರಗಾ ರಾಷ್ಟ್ರೀಯ ಶಾಲೆಯ ಮುಖ್ಯೋಪಾಧ್ಯಾಯರಾಗಿ ಸೇವೆ ಸಲ್ಲಿಸುತ್ತಾ ಯುವಕರಲ್ಲಿ ರಾಷ್ಟ್ರಪ್ರೇಮ ಬೆಳೆಸಿದರು.

ಸನ್ಯಾಸ ಸ್ವೀಕಾರ: 1930ರ ದಶಕದ ಆರಂಭದಲ್ಲಿ ಸನ್ಯಾಸ ದೀಕ್ಷೆ ಪಡೆದು ಸ್ವಾಮಿ ರಮಾನಂದ ತೀರ್ಥ ಎಂಬ ನಾಮಧೇಯವನ್ನು ಪಡೆದರು. ಸನ್ಯಾಸಿಯಾದ ನಂತರವೂ ಸಮಾಜ ಸೇವೆ ಮತ್ತು ಶಿಕ್ಷಣ ಸಂಸ್ಥೆಗಳ ಸ್ಥಾಪನೆಗೆ ತಮ್ಮ ಜೀವನವನ್ನು ಮುಡಿಪಾಗಿಟ್ಟರು.

ಕೃಷಿ ಪರಿಕರ ಮಾರಾಟಗಾರರ ಸಂಘದ ಅಧ್ಯಕ್ಷರಾಗಿ ವಾರದ ಆಯ್ಕೆ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ತಾಲೂಕು ಕೃಷಿ ಪರಿಕರ ಮಾರಾಟಗಾರರ ಸಂಘದ ಗೌರವ ಅಧ್ಯಕ್ಷರಾಗಿ ಶ್ರೀಕಾಂತ ಬ್ಯಾಕೋಡ, ತಾಲೂಕಾಧ್ಯಕ್ಷರಾಗಿ ಮನೋಜ ರಾಚಪ್ಪ ವಾರದ, ಉಪಾಧ್ಯಕ್ಷರಾಗಿ ವಿಲಾಸ ರೇಶ್ಮಿ, ಕಾರ್ಯದರ್ಶಿಯಾಗಿ ಶಿವು ಶಹಾಪುರ, ಉಪ ಕಾರ್ಯದರ್ಶಿಯಾಗಿ ಮಹಾದೇವ ಕೋಳಿ ಹಾಗೂ ಖಜಾಂಚಿಯಾಗಿ ಬಸವರಾಜ ಕಕ್ಕಳಮೇಲಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಜೊತೆಗೆ ಪದಾಧಿಕಾರಿ, ಕೋರ್ ಕಮಿಟಿ ಸದಸ್ಯರು ಹಾಗೂ ಹಿರಿಯ ಸಲಹಾ ಸಮಿತಿ ಸದಸ್ಯರಾಗಿ ಸಂಗಮೇಶ ಗುಣಾರಿ, ದೇವಪ್ಪ ಪರಗೋಂಡ, ವಿನೋದ ಲೋಣಿ, ಸಿದ್ದು ಮಕನಾಪುರ, ಅಶೋಕ ತೆಗ್ಗಳ್ಳಿ, ಚಂದ್ರಶೇಖರ ಇಂಚಿಗೇರಿ, ಪ್ರಕಾಶ್ ಗೌಡ ಬಿರಾದಾರ, ದೌಲತರಾಯ ಕುರುನಹಳ್ಳಿ, ಕಾಸಯ್ಯಸ್ವಾಮಿ ಸಾಲಿಮಠ, ಕಲ್ಲನಗೌಡ ಪಾಟೀಲ್, ದುಂಡಪ್ಪ ನಂದಿ ಹಾಗೂ ಪಿ.ಎಸ್. ಬಿರಾದಾರ. ರಾಚಪ್ಪ ವಾರದ, ಶಿವು ಹತ್ತಿ, ಪ್ರಕಾಶ್ ರೇಶ್ಮಿ, ಶಂಕರಗೌಡ ಬನೆಟ್ಟಿ ಹಾಗೂ ಸುರೇಶ ಮಳಲಿ ಆಯ್ಕೆಯಾಗಿದ್ದಾರೆ.

> "ರೈತರಿಗೆ ಗುಣಮಟ್ಟದ ಕೃಷಿ ಪರಿಕರಗಳನ್ನು ಒದಗಿಸುವುದು, ಕೃಷಿ ಪರಿಕರ ಮಾರಾಟಗಾರರ ಹಿತಾಸಕ್ತಿ ಕಾಪಾಡುವುದು ಹಾಗೂ ರೈತರು ಮತ್ತು ಮಾರಾಟಗಾರರ ನಡುವೆ ಉತ್ತಮ ಬಾಂಧವ್ಯ ಬೆಳೆಸುವುದು. ರೈತರ ಸೇವೆ ನಮ್ಮ ಗುರಿ ಎಂಬ ಧ್ಯೇಯವಾಕ್ಯದೊಂದಿಗೆ ಸಂಘವು ರೈತರ ಅಭಿವೃದ್ಧಿ ಹಾಗೂ ಕೃಷಿ ಕ್ಷೇತ್ರದ ಪ್ರಗತಿಗೆ ಶ್ರಮಿಸುವೆ."
>
> ■ ಮನೋಜ ವಾರದ
> ತಾಲೂಕಾಧ್ಯಕ್ಷರು, ಸಿಂದಗಿ

ಜಪ್ತಿ ಮೋಟಾರ್ ಸೈಕಲ್ ಬಹಿರಂಗ ಹರಾಜು

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರ ಸಂಚಾರ ಪೊಲೀಸ್ ಠಾಣೆ ವ್ಯಾಪ್ತಿಯ ಜಪ್ತಿ ಮಾಡಲಾದ ಹಾಗೂ ವಾರಸುದಾರರು ಪತ್ತೆಯಾಗದ ಮೋಟಾರ್ ಸೈಕಲ್‌ಗಳನ್ನು ಮಾನ್ಯ ನ್ಯಾಯಾಲಯದ ಆದೇಶದ ಮೇರೆಗೆ ಡಿ.6ರಂದು ಸಂಚಾರಿ ಪೊಲೀಸ್ ಠಾಣೆ ಆವರಣದಲ್ಲಿ ಬಹಿರಂಗ ಹರಾಜು ಮಾಡಲಾಗುವುದು. ಈ ಹರಾಜಿನಲ್ಲಿ ಆಸಕ್ತರ ಭಾಗವಹಿಸಬಹುದಾಗಿದೆ ಎಂದು ವಿಜಯಪುರ ಸಂಚಾರ ಪೊಲೀಸ್ ಠಾಣಾ ಪೊಲೀಸ್ ಇನ್ಸ್‌ಪೆಕ್ಟರ್ ಅಲಿ ಎ. ಶೇಖ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎಲ್ಲ ತಾಲೂಕು ಕಚೇರಿಗಳು ನಿಡಗುಂದಿಯಲ್ಲಿ ನಿರ್ಮಿಸಲು ಆಗ್ರಹ



■ ಉದಯರಶ್ಮಿ ದಿನಪತ್ರಿಕೆ

ನಿಡಗುಂದಿ ತಾಲೂಕು ಹೋರಾಟ ಸಮಿತಿಯಿಂದ ನ. 30 ರಂದು ಸರಣಿ ಉಪವಾಸ ಸತ್ಯಾಗ್ರಹ ಹಮ್ಮಿಕೊಳ್ಳಲು ನಿರ್ಧಾರ

ನಿಡಗುಂದಿ: ಪಟ್ಟಣ ವ್ಯಾಪ್ತಿಯಲ್ಲಿಯೇ ಎಲ್ಲ ತಾಲೂಕು ಮಟ್ಟದ ಸರ್ಕಾರಿ ಕಚೇರಿಗಳನ್ನು ನಿರ್ಮಿಸಬೇಕು ಎಂದು ಆಗ್ರಹಿಸಿ ತಾಲೂಕು ಹೋರಾಟ ಸಮಿತಿಯಿಂದ ನ. 30 ರಂದು ಸರಣಿ ಉಪವಾಸ ಸತ್ಯಾಗ್ರಹ ಹಮ್ಮಿಕೊಳ್ಳಲಾಗಿದೆ ಎಂದು ಸಮಿತಿ ಮುಖಂಡ ಡಾ. ಸಂಗಮೇಶ ಗೂಗಿಹಾಳ ತಿಳಿಸಿದರು.

ಪಟ್ಟಣದ ರುದ್ರೇಶ್ವರ ಮಠದಲ್ಲಿ ಉಪವಾಸ ಸತ್ಯಾಗ್ರಹದ ನಿಮಿತ್ತ ನಡೆದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು.

ತಾಲೂಕು ಕೇಂದ್ರದ ಸಮಗ್ರ ಅಭಿವೃದ್ಧಿ ಹಾಗೂ ಜನರಿಗೆ ಆಡಳಿತಾತ್ಮಕ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಎಲ್ಲ ಸರ್ಕಾರಿ ಕಚೇರಿಗಳನ್ನು ನಿಡಗುಂದಿ ಪಟ್ಟಣದ ವ್ಯಾಪ್ತಿಯಲ್ಲಿಯೇ ನಿರ್ಮಿಸಬೇಕು. ಈ ಬೇಡಿಕೆ ಈಡೇರುವವರೆಗೆ ಹೋರಾಟ ಮುಂದುವರಿಸಲಾಗುವುದು ಎಂಬ ಅಭಿಪ್ರಾಯ ಸಭೆಯಲ್ಲಿ ವ್ಯಕ್ತವಾಯಿತು. ಸಭೆಯಲ್ಲಿ ಶಿವಾನಂದ ಮುಚ್ಚಂಡಿ ಮಾತನಾಡಿದರು.

ಸಭೆಯಲ್ಲಿ ಸಂಗಣ್ಣ ಕೋಟಿನ, ಸಂಗಮೇಶ ಗೂಗಿಹಾಳ, ಶಿವಾನಂದ ಮುಚ್ಚಂಡಿ, ಈರಣ್ಣ ಮೂರನಾಳ, ಮುತ್ತು ಯರಪಿನತೆಲಿನಮಠ, ಮಲ್ಲಯ್ಯ ಗಣಾಚಾರಿ, ಬಸವರಾಜ ರೇವಡಿ, ಶರಣು ಶಿವಣಗಿ, ಮಹಾಂತೇಶ ಪಟ್ಟಣಶೆಟ್ಟಿ, ಭದ್ರಯ್ಯ ಗಣಾಚಾರಿ, ಮಲ್ಲು ಕುಂಬಾರ, ರುದ್ರಪ್ಪ ಹುಲ್ಲೂರ, ತಿರುಪತಿ ಬಂಡಿವಡ್ಡರ, ಶಂಕರ ರೇವಡಿ, ಅವ್ವಣ್ಣ ನಾಯಕ ಹಾಗೂ ಇತರರು ಇದ್ದರು.

ನ.28ರಂದು ಕಣ್ಣಿನ ಸಮಸ್ಯೆಗೆ ಉಚಿತ ತಪ

ಸಿದ್ಧಲಿಂಗ ವಿಭೂತಿಹಳ್ಳಿ ಸತತ 5 ನೇ ಬಾರಿ ವೈಯಕ್ತಿಕ ಚಾಂಪಿಯನ್



ಗುರುಮಠಕಲ್:ಯಾದಗಿರಿ ಜಿಲ್ಲಾ ವಾರ್ಷಿಕ ಪೊಲೀಸ್ ಕ್ರೀಡಾಕೂಟದಲ್ಲಿ ಸಿದ್ಧಲಿಂಗ ವಿಭೂತಿಹಳ್ಳಿ ಅವರು ಅಮೋಘ ಪ್ರದರ್ಶನ ನೀಡುವ ಮೂಲಕ ಸತತ ಐದನೇ ಬಾರಿಗೆ ವೈಯಕ್ತಿಕ ಚಾಂಪಿಯನ್ ಪಟ್ಟವನ್ನು ತಮ್ಮದಾಗಿಸಿಕೊಂಡಿದ್ದಾರೆ.

ಕ್ರೀಡಾಕೂಟದ ವೈಯಕ್ತಿಕ ವಿಭಾಗದ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿದ್ದ ಸಿದ್ಧಲಿಂಗ ವಿಭೂತಿಹಳ್ಳಿ ಅವರು, ಓಟ ಹಾಗೂ ಎಸೆತದ ವಿಭಾಗಗಳಲ್ಲಿ ಎದುರಾಳಿಗಳಿಗೆ ತೀವ್ರ ಪೈಪೋಟಿ ನೀಡಿ ಐದು ವಿಭಾಗಗಳಲ್ಲಿಯೂ ಪ್ರಥಮ ಸ್ಥಾನವನ್ನು ಗಳಿಸುವ ಮೂಲಕ ಹೊಸ ದಾಖಲೆ ನಿರ್ಮಿಸಿದ್ದಾರೆ.400 ಮೀಟರ್ ಓಟ.800 ಮೀಟರ್ ಓಟ,1500 ಮೀಟರ್ ಓಟ,ಚಕ್ರ ಎಸೆತ ಮತ್ತು ಎತ್ತರ ಜಿಗಿತದಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ.

ಓಟದ ಟ್ರ್ಯಾಕ್ ಹಾಗೂ ವಿಭಾಗಗಳೆರಡರಲ್ಲೂ ಏಕಕಾಲಕ್ಕೆ ಪ್ರಾಬಲ್ಯ ಮೆರೆದು ಸತತ ಐದು ವರ್ಷಗಳಿಂದ ಚಾಂಪಿಯನ್ ಪಟ್ಟವನ್ನು ಕಾಯ್ದುಕೊಂಡಿರುವುದು ಇವರ ಕ್ರೀಡಾ ಸ್ಫೂರ್ತಿ ಮತ್ತು ಕಠಿಣ ಪರಿಶ್ರಮಕ್ಕೆ ಸಾಕ್ಷಿಯಾಗಿದೆ.ಈ ಅಪೂರ್ವ ಸಾಧನೆ ಮಾಡಿದ ಸಿದ್ಧಲಿಂಗ ವಿಭೂತಿಹಳ್ಳಿ ಅವರಿಗೆ ಯಾದಗಿರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಹಿರಿಯ ಪೊಲೀಸ್ ಅಧಿಕಾರಿಗಳು ಹಾಗೂ ಯಾದಗಿರಿ ಜಿಲ್ಲಾ ಪೊಲೀಸ್ ಬಳಗದ ವತಿಯಿಂದ ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ

ಮಾದಕ ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ವಿದ್ಯಾರ್ಥಿಗಳಲ್ಲಿ ಜಾಗೃತಿ ಅಗತ್ಯ

■ ಉದಯರಶ್ಮಿ ದಿನಪತ್ರಿಕೆ

■ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಅರವಿಂದ ಹಾಗರಗಿ ಅಭಿಮತ



ವಿಜಯಪುರ: ಮಾದಕ ವಸ್ತುಗಳ ಸೇವನೆಯು ವ್ಯಕ್ತಿಯ ಆರೋಗ್ಯದ ಜೊತೆಗೆ ಕುಟುಂಬ ಮತ್ತು ಸಮಾಜದ ಮೇಲೂ ಗಂಭೀರ ದುಷ್ಪರಿಣಾಮ ಬೀರುತ್ತದೆ. ಆದ್ದರಿಂದ,ಯುವಜನತೆ ಮಾದಕ ವಸ್ತುಗಳಿಂದ ದೂರವಿದ್ದು, ವ್ಯಸನಮುಕ್ತ ಜೀವನ ನಡೆಸುವ ಸಂಕಲ್ಪ ಮಾಡಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಅರವಿಂದ ಹಾಗರಗಿ ಹೇಳಿದರು.

ನಗರದ ವಿಕಾಸ ಪ್ರೌಢಶಾಲೆಯಲ್ಲಿ ನ.25ರಂದು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು, ಜಿಲ್ಲಾ ಕಾನೂನುಸೇವೆಗಳಪ್ರಾಧಿಕಾರ,ಸಾರ್ವಜನಿಕ ಶಿಕ್ಷಣ ಇಲಾಖೆ ಹಾಗೂ ವಿಕಾಸ ಪ್ರೌಢಶಾಲೆ ಇವರ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ನಶಾಮುಕ್ತ ಭಾರತ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಾದಕ ವಸ್ತುಗಳ ಸೇವನೆಯಿಂದ ಆರೋಗ್ಯದ ಮೇಲಾಗುವ ದುಷ್ಪರಿಣಾಮಗಳು, ಯುವಜನತೆಯಲ್ಲಿ ಹೆಚ್ಚುತ್ತಿರುವ ಮಾದಕ ವಸ್ತುಗಳ ಬಳಕೆಯನ್ನು ತಡೆಗಟ್ಟುವ ಅಗತ್ಯ ಹಾಗೂ ಮಾದಕ ವಸ್ತುಗಳ ಮಾರಾಟ ಮತ್ತು ಬಳಕೆಯ ವಿರುದ್ಧ ಜಾಗೃತಿ ಮೂಡಿಸುವ ಮಹತ್ವವನ್ನು ವಿವರಿಸಿದರು. ಮಾದಕ ವ್ಯಸನವು ವ್ಯಕ್ತಿಯ ಜೀವನವನ್ನು ಹಾಳು ಮಾಡುವುದಲ್ಲದೆ, ಕುಟುಂಬದ ನೆಮ್ಮದಿ ಮತ್ತು ಸಾಮಾಜಿಕ ಸ್ವಾಸ್ಥ್ಯಕ್ಕೂ ಧಕ್ಕೆ ಉಂಟುಮಾಡುತ್ತದೆ. ಆದ–ರಿಂದ ವಿದ್ಯಾರ್ಥಿಗಳು ಮಾದಕ ವಸ್ತುಗಳ ಆಕರ್ಷಣೆಗೆ ಒಳಗಾಗದೆ,

ದುಶ್ಚಟಗಳಿಂದ ದೂರವಿದ್ದು, ಸುಂದರ ಜೀವನ ರೂಪಿಸಿಕೊಳ್ಳುವ ಮೂಲಕ ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಸಲಹೆ ನೀಡಿದರು. ಮಾದಕ ವ್ಯಸನಕ್ಕೆ ಒಳಗಾದವರನ್ನು ನಿರ್ಲಕ್ಷಿಸದೆ, ಅವರಿಗೆ ಸೂಕ್ತ ಸಮಾಲೋಚನೆ ಮತ್ತು ಪುನರ್ವಸತಿ ಸೌಲಭ್ಯ ಕಲ್ಪಿಸುವುದು ಅಗತ್ಯ. ವ್ಯಸನಮುಕ್ತ ಸಮಾಜ ನಿರ್ಮಾಣದಲ್ಲಿ ವಿದ್ಯಾರ್ಥಿಗಳು, ಪೋಷಕರು, ಶಿಕ್ಷಕರು ಹಾಗೂ ಸಾರ್ವಜನಿಕರು ಸಕ್ರಿಯವಾಗಿ ಕೈಜೋಡಿಸಬೇಕು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ರಾಘವೇಂದ್ರ ವಿ. ಹೊಸೂರ,ಜಿಲ್ಲಾ ನ್ಯಾಯವಾದಿಗಳ ಸಂಘದ ಅಧ್ಯಕ್ಷ ಡಿ.ಜಿ. ಬಿರಾದಾರ, ಶಿಕ್ಷಣ ಇಲಾಖೆಯ ಇ.ಸಿ.ಒ. ಎಲ್.ಎಸ್.ಬಿರಾದಾರ,ನೋಡೆಲ್ ಅಧಿಕಾರಿ ಸವಿತಾ ಗೋಡೆಕಾರ, ಯಲಗೂರೇಶ್ವರ ಸಮೂಹ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಎಚ್.ಜಿ. ತೋನಶ್ಯಾಳ ಹಾಗೂ ಶಿಕ್ಷಣ ಇಲಾಖೆಯ ಕೆಬಿಎಸ್ ನಂ.03ರ ಸಿಆರ್‌ಪಿ ಮುಬಾರಕ ಜಮಾದಾರ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಶಿಕ್ಷಣದಿಂದ ಮಾತ್ರ ಸಮಾಜದಲ್ಲಿ ಬದಲಾವಣೆ ಸಾಧ್ಯ: ಶಾಸಕ ತುನ್ನೂರ



ಯಾದಗಿರಿ: ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಪ್ರತಿಯೊಂದು ಕ್ಷೇತ್ರದಲ್ಲಿಯೂ ಪೈಪೋಟಿ ಹೆಚ್ಚಾಗುತ್ತಿದ್ದು, ಶಿಕ್ಷಣಕ್ಕೆ ಹೆಚ್ಚಿನ ಮಹತ್ವವಿದೆ. ಗ್ರಾಮೀಣ ಭಾಗದ ಪೋಷಕರು ತಮ್ಮ ಮಕ್ಕಳಿಗೆ ತಪ್ಪದೇ ಗುಣಮಟ್ಟದ ಶಿಕ್ಷಣ ಕೊಡಿಸುವ ಮೂಲಕ ಸಮಾಜದಲ್ಲಿ ಬದಲಾವಣೆ ತರಲು ಸಾಧ್ಯ. ವಿದ್ಯಾರ್ಥಿಗಳು ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯ ಪಡೆದುಕೊಂಡು ತಮ್ಮ ಗುರಿ ಸಾಧಿಸಬೇಕು ಎಂದು ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರ ಹೇಳಿದರು.

ವಡಗೇರಾ ತಾಲ್ಲೂಕಿನ ಬೆಂಡೆಬೆಂಬಳಿ ಗ್ರಾಮದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ (ಕೆಕೆಆರ್‌ಡಿಬಿ) ವತಿಯಿಂದ 1.09 ಕೋಟಿ ವೆಚ್ಚದಲ್ಲಿ ನಿರ್ಮಿಸಲಾದ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯದ ಹೆಚ್ಚುವರಿ ಶಾಲಾ ಕೊಠಡಿಗಳನ್ನು ಉದ್ಘಾಟಿಸಿ, ಹೆಚ್ಚುವರಿಯಾಗಿ 1.11 ಕೋಟಿ ವೆಚ್ಚದಲ್ಲಿ 8 ನೂತನ ಶಾಲಾ ಕೊಠಡಿಗಳ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು.

ರಾಜ್ಯ ಸರ್ಕಾರ ಶಿಕ್ಷಣ, ಆರೋಗ್ಯ, ಕೃಷಿ ಸೇ–ರಿದಂತೆ ವಿವಿಧ ಕ್ಷೇತ್ರಗಳ ಅಭಿವೃದ್ಧಿಗೆ ವಿಶೇಷ ಆದ್ಯತೆ ನೀಡುತ್ತಿದೆ. ಅದರಲ್ಲೂ ಗ್ರಾಮೀಣ ಪ್ರದೇಶದ ಜನ–ರಿಗೆ ಅಗತ್ಯವಾದ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ಹಲವು ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ ಎಂದು ತಿಳಿಸಿದರು.

ನನ್ನ ಮತಕ್ಷೇತ್ರದ ಕೊನೆಯ ಭಾಗದಲ್ಲಿರುವ ಪ್ರಮುಖ ಗ್ರಾಮಗಳಲ್ಲಿ ಬೆಂಡೆಬೆಂಬಳಿ ಕೂಡ ಒಂದಾಗಿದೆ. ಈ ಗ್ರಾಮ ಶೈಕ್ಷಣಿಕವಾಗಿ ಉತ್ತಮ ಬೆಳವಣಿಗೆ ಕಂಡಿದ್ದು, ಸುತ್ತಮುತ್ತಲಿನ ಹತ್ತಾರು ಗ್ರಾಮಗಳ ವಿದ್ಯಾರ್ಥಿಗಳು ಇಲ್ಲಿ ಶಿಕ್ಷಣ ಪಡೆಯಲು ಬರುತ್ತಾರೆ. ಹೆಚ್ಚಿನ ವಿದ್ಯಾರ್ಥಿಗಳು ಇಲ್ಲಿನ ವಿವಿಧ ವಸತಿ ನಿಲಯಗಳಲ್ಲಿ ವಾಸ್ತವ್ಯ ಹೂಡಿ ವಿದ್ಯಾಭ್ಯಾಸ ಮಾಡುತ್ತಿದ್ದಾರೆ. ವಿದ್ಯಾರ್ಥಿಗಳ ಅಗತ್ಯ ಹಾಗೂ ಸಮಸ್ಯೆಗಳನ್ನು ಅರಿತು ಹೆಚ್ಚುವರಿ ಕೊಠಡಿಗಳ ನಿರ್ಮಾಣಕ್ಕೆ ಆದ್ಯತೆ ನೀಡಲಾಗಿದೆ ಎಂದರು.

ಶಿಕ್ಷಕರು ಪಠ್ಯ ಬೋಧನೆಯ ಜೊತೆಗೆ ವಿದ್ಯಾರ್ಥಿಗಳಲ್ಲಿ ಉತ್ತಮ ಸಂಸ್ಕಾರ ಮತ್ತು ಮೌಲ್ಯಗಳನ್ನು ಬೆಳೆಸಬೇಕು. ಪಠ್ಯೇತರ ಚಟುವಟಿ–ಕೆಗಳಲ್ಲಿ ವಿದ್ಯಾರ್ಥಿಗಳ ಆಸಕ್ತಿಯನ್ನು ಗುರುತಿಸಿ ಪ್ರೋತ್ಸಾಹಿಸುವುದರೊಂದಿಗೆ ಅವರಲ್ಲಿ ಸ್ಪರ್ಧಾ ಮನೋಭಾವನೆ ಮೂಡಿಸಬೇಕು. ಇದ–ರಿಂದ ವಿದ್ಯಾರ್ಥಿಗಳಲ್ಲಿರುವ ಸುಪ್ತ ಪ್ರತಿಭೆ ಅನಾವರಣಗೊಳ್ಳಲು ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಕೋನಳ್ಳಿಯ ನಿತ್ಯಾನಂದ ಮಹಾಸ್ವಾಮೀಜಿ ಮಾತನಾಡಿ, ಶಾಲಾ ಆವರಣದಲ್ಲಿ ಸ್ವಚ್ಛತೆ ಮತ್ತು ಪರಿಸರ ಸಂರಕ್ಷಣೆಗೆ ಶಿಕ್ಷಕರು ಹಾಗೂ ಗ್ರಾಮಸ್ಥರು ಹೆಚ್ಚಿನ ಆದ್ಯತೆ ನೀಡಬೇಕು. ಸ್ವಚ್ಛ ಪರಿಸರವು ಮಕ್ಕಳ ಶೈಕ್ಷಣಿಕ ಬೆಳವಣಿಗೆಯ ಮೇಲೂ ಸಕಾರಾತ್ಮಕ ಪರಿಣಾಮ ಬೀರುತ್ತದೆ. ಪೋಷಕರು ಕೂಡ ಮಕ್ಕಳ ಚಟುವಟಿಕೆಗಳ ಮೇಲೆ ನಿಗಾ ವಹಿಸಿ ಸೂಕ್ತ ಮಾರ್ಗದರ್ಶನ ನೀಡಬೇಕು. ಇದರಿಂದ ಮಕ್ಕಳು ಉತ್ತಮ ಹವ್ಯಾಸಗಳನ್ನು ರೂಢಿಸಿಕೊಂಡು ಪರಿಶ್ರಮದಿಂದ ಅಧ್ಯಯನ ಮಾಡಿ ಸಮಾಜಕ್ಕೆ ಕೊಡುಗೆ ನೀಡಲು ಸಾಧ್ಯವಾಗುತ್ತದೆ ಎಂದು ಹೇಳಿದರು. ವೇದಿಕೆಯಲ್ಲಿ ಬಸ್ಸಯ್ಯಸ್ವಾಮಿ ಬೆಂಡೆಬೆಂಬಳಿ, ಸಂಜೀವರಡ್ಡಿ ಐರಡ್ಡಿ, ಚಂದ್ರಶೇಖರ ಗೌಡ ಗೋನಾಲ, ಬಂದಪ್ಪಗೌಡ ಐರಡ್ಡಿ, ಭೂಸೇನಾ ನಿಗಮದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಬನ್ನಪ್ಪ, ನಿವೃತ್ತ ಇಂಜಿನಿಯರ್ ಹೊನ್ನಪ್ಪ ಪೂಜಾರಿ, ಅಮಿರ್ ಅಲಿ, ಮರೆಪ್ಪ ಬಿಳ್ಹಾರ, ಖಾಜಾ ಮೈನುದ್ದಿನ್ ನಾಯ್ಕಲ್, ಬಿಸಿಎಂ ಅಧಿಕಾರಿ ನಾಗಮಣಿ, ಅಬ್ಬಾಸ್ ಅಲಿ ಗಡ್ಡಿಮನಿ, ಬಾಬುಗೌಡ ಮಾಚನೂರ, ಇಂಜಿನಿಯರ್ ರಮೇಶ, ಪ್ರಾಂಶುಪಾಲ ಮಲ್ಲಿಕಾರ್ಜುನ ಪಾಟೀಲ್ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಇಂಜಿನಿಯರ್ ಲಕ್ಷ್ಮಣ ಬಾವೂರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಲಬುರಗಿ ಅಭಿವೃದ್ಧಿಗೆ ಆಗ್ರಹಿಸಿ ಡಿ.10ರಂದು ಬೃಹತ್ ಪ್ರತಿಭಟನೆ: ದೇವೇಂದ್ರ ದೇಸಾಯಿ ಕಲ್ಲೂರ

ಕಲಬುರಗಿ: ಕಲಬುರಗಿ ನಗರದ ಸಮಗ್ರ ಹಾಗೂ ಶಾಶ್ವತ ಅಭಿವೃದ್ಧಿಗೆ ಆಗ್ರಹಿಸಿ ಡಿಸೆಂಬರ್ 10ರಂದು ಬೃಹತ್ ಪ್ರತಿಭಟನಾ ಮೆರವಣಿಗೆ ಹಮ್ಮಿಕೊಳ್ಳಲಾಗುವುದು ಎಂದು ಜೈ ಕನ್ನಡ ಜಾಗೃತಿ ವೇದಿಕೆ ಹಾಗೂ ವಿಶ್ವಕರ್ಮ ಹೋರಾಟ ಸಮಿತಿಯ ಅಧ್ಯಕ್ಷ ದೇವೇಂದ್ರ ದೇಸಾಯಿ ಕಲ್ಲೂರ ಎಚ್ಚರಿಕೆ ನೀಡಿದ್ದಾರೆ. ನಗರದಲ್ಲಿ ಕಳೆದ ಮೂರು ವರ್ಷಗಳಿಂದ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಂಡಿದ್ದು, ರಸ್ತೆಗಳು ಸಂಪೂರ್ಣ ಹದಗೆಟ್ಟಿವೆ. ಇದರಿಂದ ಸಾರ್ವಜನಿಕರು ಪ್ರತಿದಿನ ಸಂಚಾರದ ಸಮಸ್ಯೆ ಎದುರಿಸುವಂತಾಗಿದೆ. ಸರ್ಕಾರ ಕೇವಲ ಭರವಸೆ ಮತ್ತು ಘೋಷಣೆಗಳಿಗೆ ಸೀಮಿತವಾಗದೆ, ನಗರದ ಮೂಲಭೂತ ಸಮಸ್ಯೆಗಳ ಪರಿಹಾರಕ್ಕೆ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದ್ದಾರೆ.

ನಗರಕ್ಕೆ ಶಾಶ್ವತ ಕುಡಿಯುವ ನೀರು ಪೂರೈಸುವ ಯೋಜನೆ ಪೂರ್ಣಗೊಂಡಿದೆ ಎಂದು ಹೇಳಿ ಒಂದು ವರ್ಷ ಕಳೆದರೂ, ಇದುವರೆಗೆ ಜನರಿಗೆ ಅದರ ಪ್ರಯೋಜನ ದೊರೆತಿಲ್ಲ. ಯೋಜನೆ ಪೂರ್ಣಗೊಂಡಿದ್ದರೆ ನೀರು ಪೂರೈಕೆ ಆರಂಭವಾಗದಿರುವುದಕ್ಕೆ ಕಾರಣವೇನು? ಜನರಿಗೆ ಶಾಶ್ವತ ಕುಡಿಯುವ ನೀರು ಯಾವಾಗ ಸಿಗಲಿದೆ ಎಂಬುದನ್ನು ಸರ್ಕಾರ ಸ್ಪಷ್ಟಪಡಿಸಬೇಕು ಎಂದು ಒತ್ತಾಯಿಸಿದ್ದಾರೆ. ಬೇಸಿಗೆ ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ಕುಡಿಯುವ ನೀರಿನ ಅಭಾವ ಉಂಟಾಗದಂತೆ ಈಗಿನಿಂದಲೇ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು. ಕಲಬುರಗಿ ಉತ್ತರ ಮತ್ತು ದಕ್ಷಿಣ ವಿಧಾನಸಭಾ ಕ್ಷೇತ್ರಗಳಲ್ಲಿ ಬಾಕಿ ಉಳಿದಿರುವ ಅಭಿವೃದ್ಧಿ ಕಾಮಗಾರಿಗಳಿಗೆ ವೇಗ ನೀಡಬೇಕು. ನಗರದಲ್ಲಿನ ರಸ್ತೆ, ಒಳಚರಂಡಿ ಸೇರಿದಂತೆ ಮೂಲಸೌಕರ್ಯಗಳ ಅಭಿವೃದ್ಧಿಗೆ ವಿಶೇಷ ಅನುದಾನ ಬಿಡುಗಡೆ ಮಾಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಇಂಡಿಯಲ್ಲಿ ನಡೆದ ಸಂವಿಧಾನ ದಿನಾಚರಣೆ ಕಾರ್ಯಕ್ರಮದಲ್ಲಿ ಶಾಸಕ ಯಶವಂತರಾಯಗೌಡ ಪಾಟೀಲ ಅಭಿಮತ

ಸಂವಿಧಾನದ ಮೌಲ್ಯಗಳೇ ಭಾರತದ ಭವಿಷ್ಯದ ಭದ್ರತೆ

■ ಉದಯರಶ್ಮಿ ದಿನಪತ್ರಿಕೆ



ಇಂಡಿ: ಸಂವಿಧಾನ ಕೇವಲ ನೀತಿ ನಿರೂಪಣೆ ಗುಚ್ಚವಲ್ಲ, ಅದು ಭಾರತೀಯರ ಹಕ್ಕುಗಳ ರಕ್ಷಾ ಕವಚ. ಸಮಾನತೆ ಸಾಮಾಜಿಕ ನ್ಯಾಯದ ಭರವಸೆ ಎಲ್ಲಾ ಧರ್ಮಗಳನ್ನೂ ಸಮಾನವಾಗಿ ಕಾಣುವದೇ ನಮ್ಮ ದೇಶದ ಬಲ, ಸಂವಿಧಾನದ ಮೂಲ ಆಶಯ ಪಾಲಿಸುವದೇ ನೈಜ ಗೌರವ ಎಂದು ಶಾಸಕ ಯಶವಂತರಾಯಗೌಡ ಪಾಟೀಲರು ಹೇಳಿದರು.

ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಲಯದ ಗುರುಭವನದಲ್ಲಿತಾಲೂಕಾಡಳಿತ ,ತಾಪಂ ನಗಸಭೆ, ಸಮಾಜ ಕಲ್ಯಾಣ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡ ಸಂವಿಧಾನ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಭಾರತ ಅನೇಕ ಧರ್ಮ, ಪಂಗಡ, ವೇಷ ,ಭುಷಣ ಭಾಷೆ ಹೀಗೆ ವಿವಿಧತೆಯಲ್ಲಿ ಏಕತೆ ಹೊಂದಲು ಅಂಬೇಡ್ಕರವರು ಬರೆದ ಸಂವಿಧಾನವೇ ಭದ್ರಬುನಾದಿಯಾಗಿದೆ. ಇಂದು ಇಡೀ ವಿಶ್ವದಲ್ಲಿ ಭಾರತ ಸಂವಿಧಾನ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಗೌರವಿಸುತ್ತಾರೆ ಆಂ–ದು ಸಮಾಜದಲ್ಲಿನ ಶೋಷಣೆ, ಮೌಢ್ಯನಂಬಿಕೆ ,ಕಂದಾಚಾರ ವಿರುದ್ಧ ಧ್ವನಿ ಎತ್ತಿದ ಮಹಾನ ಸಮಾಜ ಪರಿವರ್ತಕ ಅಂಬೇಡಕರರವರು ಭಾರತದ ಸಂವಿಧಾನ ಶ್ರೇಷ್ಠ ಗ್ರಂಥ ಇದನ್ನು ಪ್ರತಿಯೋಬ್ಬ ಭಾರತೀಯ ತಿಳಿದುಕೊಳ್ಳಬೇಕು ಎಂದರು. ಹಿಂದಿನ ಕಾಲದಲ್ಲಿ ಧರ್ಮಶೈದ್ದೆ, ಉಪಾಸನಾಸ್ವಾತಂತ್ರ್ಯ, ಅಭಿವ್ಯಕ್ತಿಸುವ ಹಕ್ಕು ಇರಲ್ಲಿಲ್ಲ ರಾಷ್ಟ್ರಪತಿಯಿಂದ ಹಿಡಿದ ಸಾಮಾನ್ಯ ಪ್ರಜೆಗೂ ಸಮಾನ ಗೌರವ ನೀಡಿದ ಶ್ರೇಷ್ಠ ಸಮಾಜಿಕ ತತ್ವಜ್ಞಾನಿ ಇವರ ಆದರ್ಶಗಳು ನಾವೇಲ್ಲರೂ ಪಾಲಿಸಬೇಕು ಎಂದರು

ಶಿಕ್ಷಣ ಮಹಾವಿಧ್ಯಾಲಯ ಗದಗ, ಉಪನ್ಯಾಸಕ ಎಂ ಬಿ ಹುಯಿಲಗೋಳ ಉಪನ್ಯಾಸಕ ಶ್ರೀಶೈಲ ಶರಣಪ್ಪ ಸಿಂಪಿ ಉಪನ್ಯಾಸ ನೀಡಿ, ಕ್ಷೇತ್ರ ಶಿಕ್ಷಣಾಧಿಕಾರಿ ಸುರೇಶ ಕಾಂಬಳೆ , ತಾಲೂಕಾ ಸಮಾಜ ಕಲ್ಯಾಣಾಧಿಕಾರಿ ಉಮೇಶ ಲಮಾಣಿ ಮಾತನಾಡಿದರು.

ನಿಂಬೆ ಅಭಿವೃದ್ದಿ ಮಂಡಳಿಯ ಅಧ್ಯಕ್ಷ ಭೀಮಣ್ಣಾ ಕೌಲಗಿ, ಪ್ರಶಾಂತ ಕಾಳೆ, ಇಒ ಮಹಾದೇವಪ್ಪ ಏವೂರ, ಜಟ್ಟೆಪ್ಪ ರವಳಿ, ಶಿವಯೋಗೇಪ್ಪ ಚನಗೊಂಡ, ಸದಾಶಿವ ಕಟ್ಟಿಮನಿ, ಧರ್ಮರಾಜ ವಾಲೀಕಾರ ವೇದಿಕೆಯಲ್ಲಿದ್ದರು.

ತಾಪಮಾನ ಕುಸಿತಕ್ಕೆ ಜನಜೀವನ ತತ್ತರ; ಬೆಂಕಿ ಕಾಯಿಸಿ ಚಳಿ ನಿವಾರಣೆ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ತಾಲೂಕಿನ ಬ್ರಹ್ಮದೇವನಮಡು ಗ್ರಾಮದಲ್ಲಿ ವಿಪರೀತ ಚಳಿಗೆ ಜನರು ಬೆಚ್ಚಿಬಿದ್ದಿದ್ದಾರೆ. ಕಳೆದ ಕೆಲವು ದಿನಗಳಿಂದ ತಾಪಮಾನದಲ್ಲಿ ಗಣನೀಯ ಇಳಿಕೆಯಾಗಿದ್ದು ಮುಂಜಾನೆ ಮತ್ತು ಸಂಜೆಯ ವೇಳೆ ಮೈಕೊರೆಯುವ ಚಳಿಬಿಸುತ್ತಿದೆ. ಗ್ರಾಮಸ್ಥರು ಮನೆಯಿಂದ ಹೊರಬರಲು ಹಿಂದೇಟು ಹಾಕುತ್ತಿದ್ದಾರೆ.

ಚಳಿಯಿಂದ ರಕ್ಷಣೆ ಪಡೆಯಲು ಜನರು ಟೀ ಹಾಗೂ ಬೆಂಕಿ ಕಾಯಿಸಿಕೊಳ್ಳುವ ದೃಶ್ಯ ಗ್ರಾಮದಲ್ಲಿ ಎಲ್ಲಡೆ ಸಾಮಾನ್ಯವಾಗಿದೆ. ವಿಪರೀತ ಚಳಿಯ ಪರಿಣಾಮವಾಗಿ ದಿನನಿತ್ಯ ಕೃಷಿ ಚಟುವಟಿಕೆಗಳು ಹಾಗೂ ಪತ್ರಿಕೆ ಹಾಲು ಹಾಗೂ ಕೂಲಿ ಕಾರ್ಮಿಕರ ಕೆಲಸಗಳಿಗೆ ಅಡಚಣೆಯಾಗಿದೆ. ವೃದ್ಧರು ಮತ್ತು ಚಿಕ್ಕ ಮಕ್ಕಳು ಅರೋಗ್ಯದ ಮೇಲೆ ಪರಿಣಾಮ ಹವಾಮಾನ ವೈಪರೀತ್ಯ ಮತ್ತು ವಿಪರೀತ ಚಿಕ್ಕಮಕ್ಕಳಲ್ಲಿಶೀತ, ಕೆಮ್ಮುಮತ್ತುಜ್ವರದಂತಹ ಚಳಿಯಿಂದಾಗಿ ಗ್ರಾಮದ ವೃದ್ಧರು ಹಾಗೂ ಅರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳುತ್ತಿವೆ. ಮುನ್ನೆಚ್ಚರಿಕಾ ಕ್ರಮವಾಗಿ ಬೆಚ್ಚಗಿನ ಉಡಪುಗಳನ್ನು ಧರಿಸುವಂತೆ ಹಾಗೂ ಅರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸುವಂತೆ ಸ್ಥಳೀಯ ವೈದ್ಯರು ಸಲಹೆ ನೀಡಿದ್ದಾರೆ.

**"ಕಳೆದ ಕೆಲವು ದಿನಗಳಿಂದ ಚಳಿಯ ಪ್ರಮಾಣ ವ



ಬಡವರ ಮನೆಬಾಗಿಲಿಗೆ ನ್ಯಾಯ ತಲುಪಿಸುವುದೇ ಕಾನೂನು ಪ್ರಾಧಿಕಾರದ ಆಶಯ

■ ಉದಯರಶ್ಮಿ ದಿನಪತ್ರಿಕೆ

■ ಪ್ರಧಾನ ಜಿಲ್ಲಾ ನ್ಯಾಯಾಧೀಶ ಹರೀಶ. ಎ ಅಭಿಮತ । ಬಿದರಕುಂದಿಯಲ್ಲಿ ಉಚಿತ ಕಾನೂನು ನೆರವು ಕೇಂದ್ರ ಉದ್ಘಾಟನೆ

ಮುದ್ದೇಬಿಹಾಳ: ಆರ್ಥಿಕ ಸಂಕಷ್ಟ ಅಥವಾ ಕಾನೂನು ಅರಿವಿನ ಕೊರತೆಯಿಂದಾಗಿ ಗ್ರಾಮೀಣ ಭಾಗದ ಯಾವುದೇ ವ್ಯಕ್ತಿ ನ್ಯಾಯದಿಂದ ವಂಚಿತರಾಗಬಾರದು ಎಂಬ ಮಹತ್ತರ ಉದ್ದೇಶದಿಂದ ಗ್ರಾಮ ಮಟ್ಟದಲ್ಲೇ ಉಚಿತ ಕಾನೂನು ನೆರವು ಕೇಂದ್ರಗಳನ್ನು ಆರಂಭಿಸಲಾಗುತ್ತಿದೆ ಎಂದು ವಿಜಯಪುರದ ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀ ಹರೀಶ. ಎ ಹೇಳಿದರು. ತಾಲ್ಲೂಕಿನ ಬಿದರಕುಂದಿ ಗ್ರಾಮ ಪಂಚಾಯತ್ ಆವರಣದಲ್ಲಿ ಕಾನೂನು ಸೇವೆಗಳ ಪ್ರಾಧಿಕಾರ, ಕಾನೂನು ಸೇವೆಗಳ ಸಮಿತಿ, ನ್ಯಾಯವಾದಿಗಳ ಸಂಘ, ತಾಲೂಕಾ ಪಂಚಾಯತ್, ಗ್ರಾಮ ಪಂಚಾಯತ್ ಹಾಗೂ ವಿವಿಧ ಸರ್ಕಾರಿ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಉಚಿತ ಕಾನೂನು ನೆರವು ಕೇಂದ್ರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾಮೀಣ ಜನರು ಸಣ್ಣಪುಟ್ಟ ವ್ಯಾಜ್ಯಗಳಿಗೆ ನ್ಯಾಯಾಲಯಗಳಿಗೆ ಅಲೆದಾಡಿ ಸಮಯ ಮತ್ತು ಹಣ ವ್ಯಯ ಮಾಡುವ ಬದಲು, ಸ್ಥಳೀಯವಾಗಿಯೇ ತೆರೆಯಲಾಗಿರುವ ಈ ಕೇಂದ್ರದ ಮೂಲಕ ಉಚಿತ ಕಾನೂನು ಸಲಹೆ ಹಾಗೂ ಮಾರ್ಗದರ್ಶನ ಪಡೆದುಕೊಳ್ಳುವ ಮೂಲಕ ಕೇಂದ್ರದ ಸದುಪಯೋಗ ಪಡೆದುಕೊಳ್ಳಬೇಕು ಎಂದರು. ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಸಂಗನಗೌಡ ಬಿರಾದಾರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ವಿಜಯಪುರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಅರವಿಂದ ಹಾಗರಗಿ, ಮುದ್ದೇಬಿಹಾಳದ ಸಿವಿಲ್ ನ್ಯಾಯಾಧೀಶರು ಹಾಗೂ ತಾಲೂಕಾ ಕಾನೂನು ಸೇವೆಗಳ ಸಮಿತಿಯ ಸದಸ್ಯ ಕಾರ್ಯದರ್ಶಿಗಳಾದ ರಾಮಮೂರ್ತಿ. ಎನ್, ನ್ಯಾಯವಾದಿಗಳ ಸಂಘದ ಅಧ್ಯಕ್ಷ ಶಶಿಕಾಂತ ಮಾಲಗತ್ತಿ ಅವರು ಅತಿಥಿಗಳಾಗಿ ಭಾಗವಹಿಸಿ, ಕೇಂದ್ರದ ಕಾರ್ಯವೈಖರಿ ಹಾಗೂ ಸಾರ್ವಜನಿಕರಿಗೆ ದೊರೆಯುವ ಉಚಿತ ಕಾನೂನು ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

ನ್ಯಾಯವಾದಿಗಳಾದ ಪಿ.ಬಿ.ಗೌಡರ, ರವಿ ನಾಲತವಾಡ, ಬಿ.ಪಿ.ಮ್ಯಾಗೇರಿ, ಶ್ರೀಕಾಂತ ಕಡೂರ, ಬಿ.ವಾಯ್.ಮೇಟಿ ಸೇರಿದಂತೆ ಗ್ರಾಮ ಪಂಚಾಯತ್ ಜನಪ್ರತಿನಿಧಿಗಳು, ವಿವಿಧ ಸರ್ಕಾರಿ ಇಲಾಖೆಗಳ ಅಧಿಕಾರಿಗಳು, ಕಾನೂನು ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರು ಇದ್ದರು.



ಅನೀಮಿಯಾ ತಡೆಗಟ್ಟುವಲ್ಲಿ ಸಂಸ್ಥೆಗಳ ಪಾತ್ರ ಅನನ್ಯ :ಗುಮಶೆಟ್ಟಿ

■ ಉದಯರಶ್ಮಿ ದಿನಪತ್ರಿಕೆ

ಕಲಕೇರಿ: ಅನೀಮಿಯಾ ತಡೆಗಟ್ಟುವಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಪಾತ್ರ ಮುಖ್ಯವಾಗಿದ್ದು ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ಅನೀಮಿಯಾ ಮುಕ್ತ ಭಾರತವನ್ನು ನಿರ್ಮಾಣ ಮಾಡಲು ಹತ್ತು ಹಲವು ಯೋಜನೆಗಳನ್ನು ಹಾಕಿಕೊಂಡಿದ್ದು ಸಾರ್ವಜನಿಕರು ಇದರ ಸದುಪಯೋಗವನ್ನು ಪಡೆದಕೊಳ್ಳಬೇಕು ಎಂದು ಬಸವೇಶ್ವರ ಪದವಿಪೂರ್ವ ಕಾಲೇಜಿನ ಪ್ರಾಚಾರ್ಯ ರವಿ ಗುಮಶೆಟ್ಟಿ ಹೇಳಿದರು.

ಕಲಕೇರಿ ಗ್ರಾಮದ ಮಲ್ಲಿಕಾರ್ಜುನ ವಿದ್ಯಾವರ್ಧಕ ಸಂಘದ ಅಡಿಯಲ್ಲಿ ನಡೆಯುತ್ತಿರುವ ಬಸವೇಶ್ವರ ಸಮೂಹ ಶಿಕ್ಷಣ ಸಂಸ್ಥೆಯಲ್ಲಿಗುಜರಾತಿನ ರಾಜಚಂದ್ರ ಆಸ್ಪತ್ರೆ ಮತ್ತು ಸಂಶೋದನಾ ಕೇಂದ್ರ, ಕಲಕೇರಿಯ ಸ್ವಾಭಿಮಾನ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಸ್ಪಂದನ ಸ್ವಯಂ ಸೇವಾ ಸಂಸ್ಥೆ ವಿಜಯಪುರ, ಭಾರತೀಯ ಸುರಾಜ್ಯ ಸಂಸ್ಥೆ ಕನ್ನೂರ ಮತ್ತು ಆರೋಗ್ಯ ಇಲಾಖೆಯ ಸಹಯೋಗದಲ್ಲಿ ಹಮ್ಮಿಕೊಂಡ ಅನೀಮಿಯಾ ತಡೆಗಟ್ಟುವಿಕೆ ಹಾಗೂ ಅರಿವು ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಅನೀಮಿಯಾ ಮಕ್ಕಳಲ್ಲಿ ಮತ್ತು ಮಹಿಳೆಯರಲ್ಲಿ ಹೆಚ್ಚಾಗಿ ಕಂಡು ಬರುತ್ತಿದ್ದು ಇದಕ್ಕೆ ಮುಖ್ಯ ಕಾರಣ ಇಂದಿನ ಅಹಾರ ಪದ್ದತಿಯಾಗಿದೆ. ಅನೀಮಿಯಾ ಮುಕ್ತ ಭಾರತಕ್ಕಾಗಿ ಸರ್ಕಾರದ ಯೋಜನೆಗಳನ್ನು ಯಶಸ್ವಿಗೊಳಿಸಲು ಇದಕ್ಕೆ ಸಹಕಾರಿಯಾಗಿ ರಾಜ್ಯದಲ್ಲಿ ವಿವಿದ ಸಂಘ ಸಂಸ್ಥೆಗಳು ನಿರಂತರವಾಗಿ ಕೆಲಸವನ್ನು ಮಾಡುತ್ತಿರುವದು ಶ್ಲಾಘನೀಯ ಎಂದರು.

ಸ್ವಾಭಿಮಾನ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಸಂಚಾಲಕಿಯರಾದ ಅಂಬಿಕಾ ಜಂಬಗಿ ಮಾತನಾಡಿ, ಹಿಮೋಗ್ಲೋಬಿನ್ ದೈಹಿಕ ಶಕ್ತಿ ಮತ್ತು ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸುವುದರ ಜೊತೆಗೆ ಏಕಾಗ್ರತೆ ಮತ್ತು ಮೆದುಳಿನ ಕಾರ್ಯವನ್ನು ಸುಧಾರಿಸಿ ಉತ್ತಮ ಆರೋಗ್ಯವಂತರಾಗಿರಲು ಸಹಾಯ ಮಾಡುತ್ತದೆ ಎಂದು ಹೇಳಿದರು.

ಈ ವೇಳೆ ಬಸವೇಶ್ವರ ಸಮೂಹ ಶಿಕ್ಷಣ ಸಂಸ್ಥೆಯ ಪದವಿ ಪೂರ್ವ ಕಾಲೇಜು, ಪ್ರೌಢಶಾಲೆ, ಮತ್ತು ಪದವಿ ಕಾಲೇಜಿನ ವಿದ್ಯಾರ್ಥಿಗಳಿಗೆ ರಕ್ತ ತಪಾಸಣೆಯನ್ನು ಕೈಗೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಮಿಜಭಾ ಹಿಪ್ಪರಗಿ, ಮಲ್ಲು ಜಂಬಗಿ, ಬಸವರಾಜ ಕುಂಬಾರ, ಶ್ರೀದೇವಿ ಝಳಕಿ, ಶೋಭಾ ಹಡಪದ, ಗುರುರಾಜ ಮಾಡಗಿ, ವಿರೇಶ ಝಳಕಿ ಸೇರಿದಂತೆ ಇತರರು ಇದ್ದರು.

ಮಕ್ಕಳ ಸುಪ್ತ ಪ್ರತಿಭೆಗೆ ವೇದಿಕೆಯಾದ ಪ್ರತಿಭಾ ಕಾರಂಜಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಪ್ರತಿಯೊಂದು ಮಗುವಿನಲ್ಲೂ ಒಂದೊಂದು ವಿಶೇಷ ಪ್ರತಿಭೆ ಅಡಗಿರುತ್ತದೆ. ಅದನ್ನು ಗುರುತಿಸಿ, ಪ್ರೋತ್ಸಾಹಿಸಿ ಅನಾವರಣಗೊಳಿಸಲು ಸೂಕ್ತ ವೇದಿಕೆ ಹಾಗೂ ಅವಕಾಶ ಕಲ್ಪಿಸುವುದು ಅಗತ್ಯ. ಈ ನಿಟ್ಟಿನಲ್ಲಿ ಪ್ರತಿಭಾ ಕಾರಂಜಿ ಕಾರ್ಯಕ್ರಮ ಮಕ್ಕಳ ಪ್ರತಿಭೆ ಹೊರಹೊಮ್ಮಿಸಲು ಉತ್ತಮ ವೇದಿಕೆಯಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಬಸವರಾಜ ತಳವಾರ ಹೇಳಿದರು.

ನಗರದ ಶ್ರೀ ಮಾಣಿಕೇಶ್ವರಿ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಬುಧವಾರ ಶಾಲಾ ಶಿಕ್ಷಣ ಇಲಾಖೆ, ಜಿಲ್ಲಾ ಪಂಚಾಯತ ವಿಜಯಪುರ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ ವಿಜಯಪುರ ಗ್ರಾಮೀಣ ಇವರ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ತಾಲೂಕು ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶಿಕ್ಷಣ ಎಂದರೆ ಕೇವಲ ಪಠ್ಯಪುಸ್ತಕದ ಜ್ಞಾನಕ್ಕೆ ಸೀಮಿತವಾಗಬಾರದು. ಮಕ್ಕಳಲ್ಲಿ ಅಡಗಿರುವ ಸೃಜನಶೀಲತೆ, ಕಲಾತ್ಮಕತೆ, ಸಾಹಿತ್ಯಾಸಕ್ತಿ, ಸಂಗೀತ, ನೃತ್ಯ, ಅಭಿನಯ ಹಾಗೂ ಭಾಷಾ ಕೌಶಲ್ಯಗಳಿಗೂ ಸಮಾನ ಪ್ರೋತ್ಸಾಹ ದೊರೆಯಬೇಕು ಎಂದರು.

ಸಂಸ್ಥೆಯ ಮುಖ್ಯಸ್ಥ ಚಿದಾನಂದ ಅವಟಿ ಮಾತನಾಡಿ ಸ್ಪರ್ಧೆಯಲ್ಲಿ ಗೆಲುವು ಸಾಧಿಸುವುದೊಂದೇ ಮುಖ್ಯವಲ್ಲ. ಭಾಗವಹಿಸುವ ಮನೋಭಾವ, ಸೋಲು ಗೆಲುವನ್ನು ಸಮಾನವಾಗಿ ಸ್ವೀಕರಿಸುವ ಗುಣ ಹಾಗೂ ಇತರರ ಪ್ರತಿಭೆಯನ್ನು ಗೌರವಿಸುವ ಸಂಸ್ಕಾರ ಮಕ್ಕಳಲ್ಲಿ ಬೆಳೆಯಬೇಕು. ಇಂತಹ ಕಾರ್ಯಕ್ರಮಗಳು ಮಕ್ಕಳ ವ್ಯಕ್ತಿತ್ವ ವಿಕಸನದ ಜೊತೆಗೆ ಅವರಲ್ಲಿ ಸ್ಪರ್ಧಾತ್ಮಕ ಮನೋಭಾವ ಬೆಳೆಸಲು ಸಹಕಾರಿಯಾಗುತ್ತವೆ ಎಂದು ಹೇಳಿದರು.

ತಾಲ್ಲೂಕಿನ ವಿವಿಧ ಶಾಲೆಗಳಿಂದ ಆಗಮಿಸಿದ್ದ ವಿದ್ಯಾರ್ಥಿಗಳು ವಿವಿಧ ಸ್ಪರ್ಧೆಗಳಲ್ಲಿ ಉತ್ಸಾಹದಿಂದ ಪಾಲ್ಗೊಂಡು ತಮ್ಮಲ್ಲಿರುವ ಕಲಾ ಪ್ರತಿಭೆಯನ್ನು ಪ್ರದರ್ಶಿಸಿದರು. ವಿದ್ಯಾರ್ಥಿಗಳ ಹಾಡುಗಾರಿಕೆ, ನೃತ್ಯ, ಭಾಷಣ, ಅಭಿನಯ ಸೇರಿದಂತೆ ವಿವಿಧ ಸಾಂಸ್ಕೃತಿಕ ಚಟುವಟಿಕೆಗಳು ಗಮನ ಸೆಳೆದವು.

ಜಿಲ್ಲಾ ಪ್ರಾಥಮಿಕ ಶಾಲಾ ಶಿಕ್ಷಕ ಸಂಘದ ಅಧ್ಯಕ್ಷ ಅರ್ಜುನ ಲಮಾಣಿ, ಕ್ಷೇತ್ರ ಸಮನ್ವಯಾಧಿಕಾರಿ ಪ್ರಕಾಶ ಚವಾಣ, ಬಬಲೇಶ್ವರ ತಾಲ್ಲೂಕ ಸಂಘದ ಅಧ್ಯಕ್ಷ ಅಶೋಕ ಬೂದಿಹಾಳ,ಕಾರ್ಯದರ್ಶಿ ಅನೀಲ ಗೊಡೆಪ್ಪಗೋಳ, ನೌಕರ ಸಂಘದ ಅಧ್ಯಕ್ಷ ಚನ್ನಯ್ಯ ಮಠಪತಿ, ತಾಲ್ಲೂಕ ಶಿಕ್ಷಕ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಟಕ್ಕಳಕಿ, ಪ್ರಧಾನ ಕಾರ್ಯದರ್ಶಿ ಅಶೋಕ ಭಜಂತ್ರಿ, ಗ್ರಾಮೀಣ ತಾಲ್ಲೂಕಿನ ಅಧ್ಯಕ್ಷ ಅಶೋಕ ಚನಬಸಗೋಳ, ಕಾರ್ಯದರ್ಶಿ ಎಚ್.ಎಸ್.ಇಂಡಿ, ಅನೀಲ ಗೊಡ್ಯಾಪಗೋಳ, ಖಜಾಂಚಿ ಸಾಬು ಗಗನಮಾಲಿ, ಎಚ್.ಎಂ.ಚಿತ್ತರಗಿ, ಸೋಮನಾಥ ಬಾಗಲಕೋಟ, ಪ್ರತಿಭಾ ಹಿರೇಮಣಿ, ವಿಜಕ್ಕಾ ರಾಠೋಡ, ಶಿಕ್ಷಕರು, ತೀರ್ಪುಗಾರರು, ವಿದ್ಯಾರ್ಥಿಗಳು ಹಾಗೂ ಪೋಷಕರು ಉಪಸ್ಥಿತರಿದ್ದರು.

ಮಾನವೀಯ ಮೌಲ್ಯಗಳನ್ನು ಸಾರಿದ ಭಕ್ತ ಕನಕದಾಸರು

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ನಗರದ ಬಿ.ಎಲ್.ಡಿ.ಇ. ಡೀಮ್ಡ್ ವಿಶ್ವವಿದ್ಯಾಲಯದಲ್ಲಿ ಶುಕ್ರವಾರ ಶ್ರೇಷ್ಠ ಸಂತ, ದಾರ್ಶನಿಕ ಹಾಗೂ ಸಮಾಜ ಸುಧಾರಕ ಭಕ್ತ ಕನಕದಾಸರ ಜಯಂತಿಯನ್ನು ಅತ್ಯಂತ ಭಕ್ತಿ, ಗೌರವ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಸಮಕುಲಾಧಿಪತಿ ಡಾ. ವೈ. ಎಂ. ಜಯರಾಜ ಅವರು ಮಾತನಾಡಿ, "ಕನಕದಾಸರು ತಮ್ಮ ಕೀರ್ತನೆಗಳ ಮೂಲಕ ಸಮಾಜದಲ್ಲಿನ ಜಾತಿ ಪದ್ಧತಿ, ಅಸಮಾನತೆ ಹಾಗೂ ಸಾಮಾಜಿಕ ಅನಿಷ್ಟಗಳ ವಿರುದ್ಧ ಧ್ವನಿ ಎತ್ತಿ, ಸಮಾನತೆ ಮತ್ತು ಮಾನವೀಯ ಮೌಲ್ಯಗಳನ್ನು ಸಾರಿದ ಮಹಾನ್ ಸಂತರು. ಅವರ ತತ್ವ, ಆದರ್ಶ ಹಾಗೂ ಸಂದೇಶಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು" ಎಂದು ಹೇಳಿದರು. ಅಲ್ಲದೆ, ಕನಕದಾಸರ ಆಧ್ಯಾತ್ಮಿಕ ಪಯಣ, ಅವರ ಸಾಹಿತ್ಯಿಕ ಕೊಡುಗೆ ಹಾಗೂ ಸಮಾಜ ಸುಧಾರಣೆಯ ಕಾರ್ಯಗಳ ಕುರಿತು ತಮ್ಮ ವಿಚಾರಗಳನ್ನು ಹಂಚಿಕೊಂಡರು.

ವಿಶ್ವವಿದ್ಯಾಲಯದ ಕುಲಸಚಿವ ಡಾ. ಆರ್. ವಿ. ಕುಲಕರ್ಣಿ ಅವರು ಮಾತನಾಡಿ, "ಭಕ್ತ ಕನಕದಾಸರು ಕೇವಲ ಒಂದು ಸಮುದಾಯಕ್ಕೆ ಸೀಮಿತವಾದ ಸಂತವಾಗಿರದೆ, ಇಡೀ ಸಮಾಜ ಹಾಗೂ ಜಗತ್ತಿಗೆ ಸಮಾನತೆ, ಸಹಬಾಳ್ವೆ ಮತ್ತು ಮಾನವೀಯತೆಯ ಸಂದೇಶವನ್ನು ಸಾರಿದ ಮಹಾನ್ ದಾರ್ಶನಿಕರು. ಅವರ ಆದರ್ಶಗಳನ್ನು ನಾವು ನಮ್ಮ ನಡೆ–ನುಡಿಗಳಲ್ಲಿ ಅಳವಡಿಸಿಕೊಂಡು ಮುನ್ನಡೆದರೆ, ಸಮಾಜದಲ್ಲಿ ಉತ್ತಮ ಬದಲಾವಣೆ ಹಾಗೂ ಸುಧಾರಣೆ ತರಲು ಸಾಧ್ಯ" ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ವಿಶ್ವವಿದ್ಯಾಲಯದ, ಉಪಪ್ರಾಂಶುಪಾಲ ಡಾ. ಆನಂದ ಪಿ. ಅಂಬಲಿ, ಹಿರಿಯ ಉಪಪ್ರಾಚಾರ್ಯ ಡಾ. ವಿಜಯಕುಮಾರ ಕಲ್ಯಾಣಪ್ಪಗೋಳ, ಡೀನ ಅಲೈಡ ಹೆಲ್ತ ಸೈನ್ಸ, ಡಾ. ಎಸ್. ವಿ. ಪಾಟೀಲ, ವೈದ್ಯಕೀಯ ಅಧೀಕ್ಷಕ ಡಾ. ಎಸ್. ಎನ್. ಬೆಂಟೂರ, ನಿರ್ದೇಶಕರು, ಆರ್ & ಡಿ, ಡಾ. ಎಮ್. ಎಮ್. ಪಾಟೀಲ, ಪ್ಯಾಥಲಾಜಿ ವಿಭಾಗದ ಮುಖ್ಯಸ್ಥೆ, ಡಾ. ಸುರೇಖಾ ಹಿಪ್ಪರಗಿ, ಡಾ. ಪ್ರಕಾಶ ಪಾಟೀಲ, ಕಾನೂನು ಮಹಾವಿದ್ಯಾಲಯದ ಪ್ರಾಚಾರ್ಯ ಪ್ರೊ. ಡಾ. ಆರ್. ಜಿ. ಕುಲಕರ್ಣಿ, ಹಣಕಾಸು ಅಧಿಕಾರಿ ಶ್ರೀ ಬಿ. ಎಸ್. ಪಾಟೀಲ, ಸಹಾಯಕ ಕುಲಸಚಿವ ಡಾ. ಶ್ರೀಧರ ಬಗಲಿ, ಡಾ. ಮಹಾದೇವಿ ವಾಲಿ, ಆನಂದ ಪಾಟೀಲ ಹಾಗೂ ವಿವಿಧ ವಿಭಾಗಗಳ ಮುಖ್ಯಸ್ಥರು, ಬೋಧಕ ಮತ್ತು ಬೋಧಕರ ಹೊರತಾದ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕನಕದಾಸರ ಚಿಂತನೆ ಮನುಕುಲಕ್ಕೆ ಮಾರ್ಗದರ್ಶಿ

■ ಉದಯರಶ್ಮಿ ದಿನಪತ್ರಿಕೆ



ಇಂಡಿ: ಕುಲ ಜಾತಿಗಳ ಸಂಕೋಲೆ ಕಿತ್ತು ಎಲ್ಲರೂ ಒಂದೇ ಎಂಬ ಸಂದೇಶ ಸಾರಿದ ಕನಕದಾಸರ ಸಮ ಸಮಾಜದ ಬೋಧನೆ ಆಧ್ಯಾತ್ಮಿಕ ಚಿಂತನೆ ಸಮಸ್ತ ಮನುಕುಲಕ್ಕೆ ಮಾರ್ಗದರ್ಶಿಯಾಗಿದೆ ಎಂದು ಹಾಲುಮತ ಸಮಾಜದ ಮುಖಂಡ ಮತ್ತು ಶ್ರೀ ಭೀಮಾಶಂಕರ ಸಕ್ಕರೆ ಕಾರ್ಖಾನೆ ನಿರ್ದೇಶಕ ಜಟ್ಟಿಪ್ಪ ರವಳಿ ಹೇಳಿದರು.

ಅವರು ತಾಲೂಕಾ ಆಡಳಿತ ವತಿಯಿಂದ ಆಡಳಿತಸೌಧದಲ್ಲಿ ನಡೆದ ಕನಕದಾಸರ 539 ನೇ ಜಯಂತೋತ್ಸವದಲ್ಲಿ ಮಾತನಾಡಿದರು.

ಇಂದಿನ ತಾಂತ್ರಿಕ ಯುಗದ ಪೀಳಿಗೆಗೆ ಕನಕದಾಸರ ಚಿಂತನೆಗಳು ಸಮಾನತೆ ಮಾನವೀಯ ಮೌಲ್ಯ ಮತ್ತು ಆತ್ಮವಲೋಕನದ ದಾರಿ ದೀಪವಾಗಿವೆ. ದ್ವೇಷ ಅಸೂಯೆ ಒತ್ತಡಗಳಿಂಡ ಮುಕ್ತವಾದ ಆರೋಗ್ಯಕರ ಸಮಾಜ ನಿರ್ಮಿಸಲು ಅವರ ತತ್ವಗಳನ್ನು ಅನುಪಾಲಿಸುವದು ಇಂದಿನ ತುರ್ತು ಅಗತ್ಯವಾಗಿದೆ ಎಂದರು.

ಶಿಕ್ಷಕ ಸಂತೋಷ ಬಂಡೆ ಮಾತನಾಡಿ, ಕನಕದಾಸರ ಸಾಹಿತ್ಯದಲ್ಲಿ ಸಮಾನತೆ ಭ್ರಾತತ್ವ ಮತ್ತು ನೈತಿಕ ಮೌಲ್ಯಗಳನ್ನು ಇಂದಿನ ಪೀಳಿಗೆಗೆ ತಲುಪಿಬೇಕಿದೆ ಅಂದಾಗ ಮಾತ್ರ ಸುಸ್ಥಿರ ಮತ್ತು ಸಮಸಮಾಜದ ನಿರ್ಮಾಣ ಸಾಧ್ಯ ಎಂದರು.

ಶಿಕ್ಷಕ ಬಸವರಾಜ ಗೋರನಾಳ ಮಾತನಾಡಿದರು. ತಾಪಂ ಇಒ ಮಹಾದೇವಪ್ಪ ಏವೂರ, ಎಸ್.ಆರ್ ನಡಗಡ್ಡಿ, ಸರಕಾರಿ ನೌಕರರ ಸಂಘದ ತಾಲೂಕಾ ಘಟಕದ ಅಧ್ಯಕ್ಷ ಬಸವರಾಜ ರಾಹೂರ, ಆರ್.ವಿ.ಪಾಟೀಲ, ಎ.ಬಿ ಹುಣಸಗಿ, ಶ್ರೀಶೈಲ ಪೂಜಾರಿ, ದೇವೆಂದ್ರ ಕುಂಬಾರ, ಎಸ್.ಜಿ.ನಂದರಗಿ, ಭೀಮು ಕಂಟಿಕಾರ, ಅನೀಲಗೌಡ ಬಿರಾದಾರ, ಶ್ರೀಶೈಲ ಕರಶೆಟ್ಟಿ, ಸಂತೋಷ ಹೊಟಕರ, ಸಂಕೇತ ಪಾಟೀಲ, ಎಚ್.ಎಚ್. ಗುನ್ನಾಪುರ, ಐ.ಡಿ.ಕಲ್ಲೋಳಿ, ಎಸ್.ಎಂ ಒಡೆಯರ್, ಎಸ್.ಡಿ.ಕಲ್ಲೋಳ್ಳಿ , ಸುಜಾತಾ ಪೂಜಾರಿ, ಮತ್ತಿತರಿದ್ದರು.

ನಶಾ ಮುಕ್ತ ಭಾರತ ಅಭಿಯಾನ । ಸ್ವಾಸ್ಥ್ಯ ಸಂಚರಣೆ ಹಾಗೂ ಮಹಿಳಾ ಹಿಂಸಾಚಾರ ನಿರ್ಮೂಲನಾ ದಿನಾಚರಣೆಯಲ್ಲಿ ಸಿವಿಲ್ ನ್ಯಾಯಾಧೀಶ ರಾಮಮೂರ್ತಿ ಎನ್ ಕರೆ

ಯುವಜನತೆ ಮಾದಕ ವ್ಯಸನಕ್ಕೆ ಬಲಿಯಾಗದಿರಲಿ

■ ಉದಯರಶ್ಮಿ ದಿನಪತ್ರಿಕೆ



ಮುದ್ದೇಬಿಹಾಳ: ದೇಶದ ಭವಿಷ್ಯವಾಗಿರುವ ಯುವಸಮೂಹ ಮಾದಕ ವಸ್ತುಗಳ ವ್ಯಸನಕ್ಕೆ ಬಲಿಯಾಗದೆ ಸದೃಢ ಹಾಗೂ ಆರೋಗ್ಯವಂತ ಸಮಾಜ ಕಟ್ಟಲು ಮುಂದಾಗಬೇಕು ಎಂದು ಸಿವಿಲ್ ನ್ಯಾಯಾಧೀಶರು ಹಾಗೂ ತಾಲೂಕು ಕಾನೂನು ಸೇವೆಗಳ ಸಮಿತಿಯ ಸದಸ್ಯ ಕಾರ್ಯದರ್ಶಿಗಳಾದ ರಾಮಮೂರ್ತಿ ಎನ್ ಕರೆ ನೀಡಿದರು.

ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಕಾನೂನು ಸೇವೆಗಳ ಸಮಿತಿ, ನ್ಯಾಯವಾದಿಗಳ ಸಂಘ, ಪೊಲೀಸ್ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಸರ್ಕಾರಿ ಶಿಕ್ಷಣ ಇಲಾಖೆ, ಸರ್ಕಾರಿ ಪದವಿ ಪೂರ್ವ ಕಾಲೇಜು ಹಾಗೂ ವಿವಿಧ ಸರ್ಕಾರಿ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ನಶಾ ಮುಕ್ತ ಭಾರತ ಅಭಿಯಾನದಡಿ ಹಮ್ಮಿಕೊಳ್ಳಲಾಗಿದ್ದ ಅಂತರರಾಷ್ಟ್ರೀಯ ಮಾದಕ ವಸ್ತುಗಳ ಜಾಗೃತಿ, ಸ್ವಾಸ್ಥ್ಯ ಸಂಚರಣೆ ಹಾಗೂ ಮಹಿಳೆಯರ ಮೇಲಿನ ಹಿಂಸಾಚಾರ ನಿರ್ಮೂಲನಾ ದಿನಾಚರಣೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕ್ಷಣಿಕ ಮೋಹಕ್ಕಾಗಿ ಯುವಜನತೆ ಮಾದಕ ವ್ಯಸನದ ಸುಳಿಗೆ ಸಿಲುಕಿ ತಮ್ಮ ಅಮೂಲ್ಯ ಬದುಕನ್ನು ನಾಶಪಡಿಸಿಕೊಳ್ಳುತ್ತಿದ್ದಾರೆ. ವಿದ್ಯಾರ್ಥಿ ದೆಸೆಯಲ್ಲಿಯೇ ದುಶ್ಚಟಗಳಿಗೆ ನೋ ಹೇಳುವ ದೃಢ ಸಂಕಲ್ಪ ಮಾಡಬೇಕು. ಜೊತೆಗೆ, ಮನೆ ಮತ್ತು ಸಮಾಜದಲ್ಲಿ ಮ